# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 174 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 29–01–2025 ಬುಧವಾರ | ಪುಟ: 4 | ಬೆಲೆ : ರೂ.2–00

Volume - 02 Issue - 174 | RNI No: KARKAN/2023/88462 | KA/SK/CTA-874/2024-2026 | Chitradurga | Date: 29-01-2025 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

8, 9ಕ್ಕೆ ರಾಜನಹಳ್ಳಿಯಲ್ಲಿ ವಾಲ್ಮೀಕಿ ಜಾತ್ರೆ 2

ನಗರದಲ್ಲಿನ ರಸ್ತೆ ಅಗಲೀಕರಣ ಕೈ ಬಿಟ್ಟು, ವಿಸ್ತರಿಸುವ ಕುರಿತು ಯೋಜನೆ ರೂಪಿಸಿ 3

ಬಾಪೂಜಿ ಆಯುರ್ವೇದಿಕೆ ಮೆಡಿಕಲ್ ಕಾಲೇಜು, ಆಸ್ಪತ್ರೆಗೆ ದೇಹದಾನ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಬೈಕ್‌ನಲ್ಲಿ ನಿಷೇದಿತ ಸೇಂದಿ ಸಾಗಾಟ: ಪ್ರಕರಣ ದಾಖಲು



» ಚಳ್ಳಕೆರೆ

ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಮತ್ಸಮುದ್ರ ಗ್ರಾಮದಲ್ಲಿ ಅಕ್ರಮವಾಗಿ ಬೈಕ್‌ನಲ್ಲಿ ಸೇಂದಿ ಸಾಗಾಟ ಮಾಡುತ್ತಿದ್ದ ಟಿ.ಸ್ವಾಮಿ, ನಾಗರಾಜರವರನ್ನು ವಶಕ್ಕೆ ಪಡೆದು ಪ್ರಕರಣ ದಾಖಲು ಮಾಡಲಾಗಿದೆ ಎಂದು ಅಬಕಾರಿ ನಿರೀಕ್ಷಕ ಸಿ.ನಾಗರಾಜ ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಅವರು, ಜಿಲ್ಲಾ ಅಬಕಾರಿ ಉಪ ಆಯುಕ್ತರು ಹಾಗೂ ಅಬಕಾರಿ ಉಪ ಅಧೀಕ್ಷಕರ ಮಾರ್ಗದರ್ಶನದಂತೆ ಅಬಕಾರಿ ನಿರೀಕ್ಷಕ ಟಿ.ರಂಗಸ್ವಾಮಿ, ಡಿ.ಟಿ.ತಿಪ್ಪಯ್ಯ, ಪೇದೆಗಳಾದ ನಾಗರಾಜು, ಸೋಮಶೇಖರ್, ಮಂಜುಳಮ್ಮ, ದರ್ಶನ್‌ಕುಮಾರ್ ಮತ್ತು ತಂಡ ಸಾರ್ವಜನಿಕರ ಮಾಹಿತಿ ಮೇರೆಗೆ ದಾಳಿ ನಡೆಸಿ ಸುಮಾರು 51 ಸಾವಿರ ಮೌಲ್ಯದ 21 ಲೀಟರ್ ಅಕ್ರಮ ಸೇಂದಿ, ಬೈಕ್ ಸಹಿತ ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದಾರೆ.

### ಫೆ.13ರಂದು ಶ್ರೀ ತೇರುಮಲ್ಲೇಶ್ವರ ಸ್ವಾಮಿಯ ಬ್ರಹ್ಮ ರಥೋತ್ಸವ

» ಚಿತ್ರದುರ್ಗ

ಹಿರಿಯೂರು ಪಟ್ಟಣದ ದಕ್ಷಿಣ ಕಾಶಿಯೆಂದು ಹೆಸರಾಗಿರುವ ಹಿರಿಯೂರು ಪಟ್ಟಣದ ಶ್ರೀ ತೇರುಮಲ್ಲೇಶ್ವರ ಸ್ವಾಮಿಯ ಬ್ರಹ್ಮ ರಥೋತ್ಸವ ಫೆಬ್ರವರಿ 13ರಂದು ಮಧ್ಯಾಹ್ನ 12ಕ್ಕೆ ಜರುಗಲಿದೆ.

ಶ್ರೀ ತೇರುಮಲ್ಲೇಶ್ವರಸ್ವಾಮಿ ಜಾತ್ರಾ ಮಹೋತ್ಸವ ಫೆ.03 ರಿಂದ ಕಂಕಣೋತ್ಸವದೊಂದಿಗೆ ಪ್ರಾರಂಭಗೊಂಡು, ಫೆ.17 ರವರೆಗೆ ಬಹಳ ವಿಜೃಂಭಣೆ ನಡಯಲಿದೆ. ಫೆ.03ರಂದು ರಾತ್ರಿ 8ಕ್ಕೆ ಕಂಕಣ ಕಲ್ಯಾಣೋತ್ಸವ, ಫೆ.04ರಂದು ರಾತ್ರಿ 8ಕ್ಕೆ ಗಿಳಿ ವಾಹನೋತ್ಸವ, ಫೆ.05ರಂದು ರಾತ್ರಿ 8ಕ್ಕೆ ಗಂಡುಭೇರುಂಡ ವಾಹನೋತ್ಸವ, ಫೆ.06ರಂದು ರಾತ್ರಿ 8.00ಕ್ಕೆ ನವಿಲು ವಾಹನೋತ್ಸವ, ಫೆ.07ರಂದು ರಂದು ರಾತ್ರಿ 8ಕ್ಕೆ ಸಿಂಹ ವಾಹನೋತ್ಸವ, ಫೆ.08ರಂದು ರಾತ್ರಿ 8ಕ್ಕೆ ನಂದಿ ವಾಹನೋತ್ಸವ, ಫೆ.09ರಂದು ರಾತ್ರಿ 8ಕ್ಕೆ ಸರ್ಪ ವಾಹನೋತ್ಸವ, ಫೆ.10ರಂದು ರಾತ್ರಿ 8.00ಕ್ಕೆ ಅಶ್ವ ವಾಹನೋತ್ಸವ, ಫೆ.11ರಂದು ರಾತ್ರಿ 8ಕ್ಕೆ ಗಜ ವಾಹನೋತ್ಸವ (ಮೂರು ಕಳಸ ಸ್ಥಾಪನೆ) ಫೆ.12ರಂದು ಬೆಳಿಗ್ಗೆಯಿಂದ ರಾತ್ರಿಯವರೆಗೆ ಬಸವ ವಾಹನೋತ್ಸವ (ದೊಡ್ಡ ಉತ್ಸವ) ಅಕ್ಕಿ ತಂಬಿಟ್ಟಿನ ಆರತಿ ನಡೆಯಲಿದೆ.ಹಿರಿಯೂರು ತಾಲ್ಲೂಕು ಐಮಂಗಲ ಹೋಬಳಿ ಬೀರೇನಹಳ್ಳಿ ಮಜುರೆ ಕರಿಯಣ್ಣಹಟ್ಟಿ ಗ್ರಾಮದ ವೀರಕರಿಯಣ್ಣ ದೇವರ ನೇತೃತ್ವದಲ್ಲಿ ಫೆ.13ರಂದು ಬೆಳಿಗ್ಗೆ 10ಕ್ಕೆ ಶಿವಧನಸ್ಸಿನ ಗಂಗಾ ಸ್ನಾನದ ಉತ್ಸವ ನಂತರ ಮಧ್ಯಾಹ್ನ 12ಕ್ಕೆ ಮಘಾ ನಕ್ಷತ್ರದಲ್ಲಿ ಶ್ರೀ ತೇರುಮಲ್ಲೇಶ್ವರ ಸ್ವಾಮಿಯ ಬ್ರಹ್ಮ ರಥೋತ್ಸವ ನಡೆಯಲಿದ್ದು, ಮಧ್ಯಾಹ್ನ 1.30ಕ್ಕೆ ಪ್ರಸಾದ ವಿನಿಯೋಗ, ಸಂಜೆ 5ಕ್ಕೆ ಚಂದ್ರಮೌಳೇಶ್ವರ ಮತ್ತು ಉಮಾಮಹೇಶ್ವರ ರಥೋತ್ಸವ ನಡೆಯಲಿದೆ. ಫೆ.14 ರಂದು ಸಂಜೆ 4ಕ್ಕೆ ಸಿದ್ಧನಾಯಕ ವೃತ್ತದಲ್ಲಿ ಶ್ರೀ ಮದಕರಿ ಯುವಕ ಸಂಘದಿಂದಜಂಗೀಕುಸ್ತಿಯನ್ನುಏರ್ಪಡಿಸಲಾಗಿದೆ. ಫೆ.15ರಂದು ರಾತ್ರಿ 8ಕ್ಕೆ ಸುಮಂಗಲೆಯರಿಂದ ಕರ್ಪೂರದಾರತಿ, ಫೆ.16ರಂದು ರಾತ್ರಿ 8ಕ್ಕೆ ಚಿಟುಗ ಮಲ್ಲೇಶ್ವರಸ್ವಾಮಿ ದೇವಸ್ಥಾನದಲ್ಲಿ ಅಭಿಷೇಕ ಹಾಗೂ ಉಯ್ಯಾಲೋತ್ಸವ, ವಸಂತೋತ್ಸವ, ಓಕಳಿ ಪಾರ್ವಟೋತ್ಸವ ನಡೆಯಲ್ಲಿದೆ. ಫೆ.17ರಂದು ಸಂಜೆ 4ಕ್ಕೆ ಕಂಕಣ ವಿಸರ್ಜನೆಯೊಂದಿಗೆ ಜಾತ್ರಾ ಮಹೋತ್ಸವ ಮುಕ್ತಾಯಗೊಳ್ಳಲಿದೆ. ಶ್ರೀ ತೇರುಮಲ್ಲೇಶ್ವರಸ್ವಾಮಿಯ ಜಾತ್ರಾ ಮಹೋತ್ಸವಕ್ಕೆ ಭಕ್ತಾಧಿಗಳು ಹಾಗೂ ಸಾರ್ವಜನಿಕರು ತನು, ಮನ, ಧನ, ಧಾನ್ಯರೂಪದಲ್ಲಿ ಸಹಕರಿಸುವುದು, ಸಾರ್ವಜನಿಕರು ಜಾತ್ರಾ ಮಹೋತ್ಸವದ ಎಲ್ಲಾ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಶ್ರೀ ಸ್ವಾಮಿಯ ಕೃಪೆಗೆ ಪಾತ್ರರಾಗಬೇಕು ಎಂದು ಹಿರಿಯೂರು ತಾಲ್ಲೂಕು ತಹಶೀಲ್ದಾರ್ ಹಾಗೂ ಮುಜುರಾಯಿ ಅಧಿಕಾರಿ ಸಿ.ರಾಜೇಶ್ ಕುಮಾರ್ ತಿಳಿಸಿದ್ದಾರೆ.

# ಮಕ್ಕಳಿಗೆ ಪಠ್ಯದ ಜೊತೆಗೆ ಕೌಶಲ್ಯವನ್ನು ಸಹಾ ಕಲಿಸುವಂತ ಕಾರ್ಯವಾಗಬೇಕು

» ಚಿತ್ರದುರ್ಗ

ಮಕ್ಕಳಿಗೆ ಪಠ್ಯದ ಜೊತೆಗೆ ಕೌಶಲ್ಯವನ್ನು ಸಹಾ ಕಲಿಸುವಂತ ಕಾರ್ಯವಾಗಬೇಕಿದೆ, ಕೌಶಲ್ಯವನ್ನು ಹೊಂದಿದ್ದರೆ ಮುಂದಿನ ಅವರ ಬದುಕಿಗೆ ದಾರಿ ದೀಪವಾಗಲಿದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಎನ್.ಆರ್.ಮಂಜುನಾಥ್ ತಿಳಿಸಿದರು.

ಚಿತ್ರದುರ್ಗ ನಗರದ ಕಬೀರಾನಂಧ ಬಡಾವಣೆಯಲ್ಲಿನ ಶ್ರೀ ಸದ್ಗುರು ಕಬೀರಾನಂಧಸ್ವಾಮಿ ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಹಿರಿಯ ಶಾಲೆಯ ಆಶ್ರಯದಲ್ಲಿಮಂಗಳವಾರಹಮ್ಮಿಕೊಂಡಿದ್ದ ಮಕ್ಕಳ ಪ್ರತಿಭೆ ಹಾಗೂ ಕೌಶಲ್ಯ ಮೇಳವನ್ನು ಕಬೀರಾನಂದ ವೇದಿಕೆಯಲ್ಲಿ ಉದ್ಘಾಟಿಸಿ ಮಾತನಾಡಿದ ಅವರು, ಪಠ್ಯದ ಜೊತೆ ಮಕ್ಕಳು ಪಠ್ಯೇತರ ಚಟುವಟಿಕೆಗಳಲ್ಲಿ ಪಾಲ್ಗೊಂಡು ತಮ್ಮಲ್ಲಿರುವ ಪ್ರತಿಭೆಯನ್ನು ಪ್ರದರ್ಶಿಸಬೇಕು. ಇದರಿಂದ ಮಕ್ಕಳ ಸರ್ವತೋಮುಖ ಅಭಿವೃದ್ದಿಗೆ ಸಹಕಾರಿಯಾಗಲಿದೆ. ಚಿಕ್ಕವಯಸ್ಸಿನಿಂದಲೇ ಮಕ್ಕಳಿಗೆ ಏನಾದರೂ ಆಸಕ್ತಿಯನ್ನು ಮೂಡಿಸುವಂತವ ಕಾರ್ಯವಾಗಬೇಕಿದೆ. ಚಿಕ್ಕ ವಯಸ್ಸಿನಲ್ಲಿಯೇ ಕಲಿಯುವುದರಿಂದ ಅದು ಮನಸ್ಸಿನಲ್ಲಿ ಸದಾ ಹಸಿರಾಗಿರುತ್ತದೆ ಮುಂದೆಯೂ ಸಹಾ ಉಪಯೋಗಕ್ಕೆ ಬರುತ್ತದೆ ಎಂದರು.





ಮನೆಯಲ್ಲಿ ಚಿಕ್ಕ ಮಕ್ಕಳು ಏನಾದರೂ ಹೊಸದಾಗಿ ಮಾಡಿದರೆ ಅದಕ್ಕೆ ಪೋಷಕರಾದವರು ಪ್ರೋತ್ಸಾಹವನ್ನು ನೀಡಬೇಕಿದೆ, ಇದೆ ರೀತಿ ಶಾಲೆಯಲ್ಲಿಯೂ ಸಹಾ ಶಿಕ್ಷರಾದವರು ಮಕ್ಕಳಿಲ್ಲಿ ಏನಾದರೂ ಕಲಿಯುವಂತ ವಾತಾವರಣವನ್ನು ನಿರ್ಮಾಣ ಮಾಡಬೇಕಿದೆ, ಈ ಶಾಲೆಯಲ್ಲಿ ಅಭ್ಯಾಸವನ್ನು ಮಾಡುತ್ತಿರುವ ನೀವುಗಳು ಪುಣ್ಯವಂತರಾಗಿದ್ದೀರಾ ಈ ಶಾಲೆಯಲ್ಲಿ ಶಿಕ್ಷಕರ ಪಾಠದ ಜೊತೆಗೆ ಗುರುಗಳ ಆರ್ಶೀವಾದವೂ ಸಹಾ ಸಿಗುವುದರಿಂದ ಮುಂದಿನ ನಿಮ್ಮ ಬದುಕು ಹಸನಾಗಲಿದೆ ಎಂದು ಮಂಜುನಾಥ್ ನುಡಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಚಿತ್ರದುರ್ಗ ಸೈನ್ಸ್ ಫೌಂಡೇಷನ್‌ನ ಕಾರ್ಯದರ್ಶಿ ಎಚ್.ಎಸ್.ಟಿ.ಸ್ವಾಮಿ ಮಾತನಾಡಿ, ಇಂದಿನ ದಿನದಲ್ಲಿ ವಿಜ್ಞಾನ ಎನ್ನವುದು ನಮ್ಮೆಲ್ಲರ ಜೀವನ ಹಾಗೂ ಬದುಕಿನಲ್ಲಿ ಹಾಸೂ ಹೋಕ್ಕಾಗಿದೆ, ವಿಜ್ಞಾನ ಇಲ್ಲದೆ ಜೀವನ ಇಲ್ಲ ಎನ್ನುವ ವಾತಾರವಣ ನಿರ್ಮಾಣವಾಗಿದೆ. ನಮಗೆ ನಂಬಿಕೆ ಬೇಕು ಆದರೆ ಮೂಢನಂಬಿಕೆ ಇರಬಾರದು, ಮೂಢನಂಬಿಕೆ ಜನತೆಯಲ್ಲಿ ತಪ್ಪು ದಾರಿಗೆ ಎಳೆಯುತ್ತದೆ ಇದರ ಬಗ್ಗೆ ಹುಷಾರಿಗೆ ಇರಬೇಕಿದೆ ಎಂದರು.

ಚಿತ್ರದುರ್ಗ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ವಿ.ಎಲ್.ಪ್ರಶಾಂತ್ ಮಾತನಾಡಿ,ಮಕ್ಕಳಿಗೆಚಿಕ್ಕವಯಸ್ಸಿನಿಂದಲೇ ಧೈರ್ಯ ಮತ್ತು ಕೌಶಲ್ಯವನ್ನು ತುಂಬುವಂತ ಕಾರ್ಯವಾಗಬೇಕಿದೆ, ಇಲ್ಲಿಂದಲ್ಲೆ ಅವರನ್ನು ಸರಿದಾರಿಗೆ ತಂದರೆ ಮುಂದೆ ಅವರು ಉತ್ತಮ ನಾಗರೀಕರಾಗುತ್ತಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ95ನೇಮಹಾಶಿವರಾತ್ರಿ ಮಹೋತ್ಸವ ಸಮಿತಿ ಅಧ್ಯಕ್ಷರಾದ ವಿಜಯಕುಮಾರ್, ಉಪಾಧ್ಯಕ್ಷರಾದ ಬದರಿನಾಥ್, ಸಾರ್ವಜನಿಕ ಶಿಕ್ಷಣ ಇಲಾಖೆಯ ಶಿಕ್ಷಣಾಧಿಕಾರಿಗಳಾದ ಗೋವಿಂದಪ್ಪ ಗಣಪತಿ ಶಾಸ್ತ್ರಿ ಸೇರಿದಂತೆ ಇತರರು ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ಶಾಲಾ ಮಕ್ಕಳು ಪರಿಸರ, ಗಣಕಯಂತ್ರ, ವಾಯು ಮಾಲಿನ್ಯದಿಂದ ಆಗುವ ಅನಾಹುತ, ಯಾವ ಸಮಯದಲ್ಲಿ ಯಾವ ಉಡುಪು ಧರಿಸಬೇಕು, ನಮ್ಮ ಸಂವಿಧಾನ, ರಾಮಮಂದಿರ, ಹಳ್ಳಿ ವಾತಾವರಣ, ಪುಷ್ಪಗಳು, ವಿವಿಧ ರೀತಿಯ ಹಣ್ಣಿನ ಮಾದರಿಗಳು ಸೇರಿದಂತೆ ಇತರೆ ಹಲವಾರು ವಿಷಯದ ಬಗ್ಗೆ ಮಕ್ಕಳು ಮಾಡಲ್‌ನ್ನು ತಯಾರಿಸಿದ್ದರು.

## ಗೌರವ ಧನ ಹೆಚ್ಚಿಸುವಂತೆ ಒತ್ತಾಯಿಸಿ ಅಂಗನವಾಡಿ ಕಾರ್ಯಕರ್ತೆಯರಿಂದ ಡಿಸಿ ಕಚೇರಿ ಎದುರು ಪ್ರತಿಭಟನೆ

» ಚಿತ್ರದುರ್ಗ

ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರಿಗೆ ಪ್ರಸಕ್ತ ಬಜೆಟ್‌ನಲ್ಲಿ ಗೌರವ ಧನ ಹೆಚ್ಚಿಸುವಂತೆ ಕರ್ನಾಟಕ ರಾಜ್ಯ ಅಂಗನವಾಡಿ ಕಾರ್ಯಕರ್ತೆಯರ ಹಾಗೂ ಸಹಾಯಕಿಯರ ಫೆಡರೇಷನ್ ಜಿಲ್ಲಾ ಸಮಿತಿಯಿಂದ ಸೋಮವಾರ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ ಕಚೇರಿ ಸಹಾಯಕರ ಮೂಲಕ ರಾಜ್ಯದ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು.

ಪ್ರಿಯಾಂಕಗಾಂಧಿ ಘೋಷಿಸಿದ ಆರನೆ ಗ್ಯಾರೆಂಟಿಯಂತೆ ಅಂಗನವಾಡಿ ಕಾರ್ಯಕರ್ತೆಯರಿಗೆ ಮಾಸಿಕ ಹದಿನೈದು ಸಾವಿರ ರೂ. ಸಹಾಯಕಿಯರಿಗೆ ಹತ್ತು ಸಾವಿರ ರೂ.ಗಳ ಗೌರವ ಧನ ನೀಡಬೇಕು. ರಾಜ್ಯದಲ್ಲಿ ಒಂದು ಲಕ್ಷದ ನಲವತ್ತು ಸಾವಿರ ಅಂಗನವಾಡಿ ನೌಕರರು ಜೀವನ ಭದ್ರತೆಯಿಲ್ಲದೆ ಕೆಲಸ ಮಾಡುತ್ತಿದ್ದಾರೆ. ಅಂಗನವಾಡಿಯಲ್ಲಿ ಮಕ್ಕಳ ಲಾಲನೆ, ಪಾಲನೆ, ಶಾಲಾ ಪೂರ್ವ ಶಿಕ್ಷಣ ನೀಡುವುದು. ಗರ್ಭಿಣಿ, ಬಾಣಂತಿಯರಿಗೆ ಪೌಷ್ಟಿಕಾಂಶ ಆಹಾರ ಪೂರೈಸಿ ಆರೋಗ್ಯದ ಬಗ್ಗೆ ಕಾಳಜಿ ವಹಿಸುತ್ತಿರುವ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ಬೇಡಿಕೆಗಳನ್ನು ಸರ್ಕಾರ ತಿರಸ್ಕರಿಸುತ್ತ ಬರುತ್ತಿರುವುದು ನೋವಿನ ಸಂಗತಿ. ಗುಜರಾತ್ ಉಚ್ಚ ನ್ಯಾಯಾಲಯ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರಿಗೆ ಕನಿಷ್ಠ ವೇತನ ನಿಗಧಿಗೊಳಿಸುವಂತೆ ಆದೇಶಿಸಿ ತೀರ್ಪು ನೀಡಿದೆ. ರಾಜ್ಯ ಸರ್ಕಾರ ಚುನಾವಣಾ ಪ್ರಣಾಳಿಕೆಯಲ್ಲಿ ಘೋಷಿಸಿದಂತೆ ಗೌರವ ಧನ ಹೆಚ್ಚಳವಾಗಬೇಕೆಂದು ಪ್ರತಿಭಟನೆ ನೇತೃತ್ವ ವಹಿಸಿದ್ದ ಅಂಗನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಯರ ಫೆಡರೇಷನ್ ಜಿಲ್ಲಾ ಪ್ರಧಾನಕಾರ್ಯದರ್ಶಿ ಕಾಂ.ಜಿ.ಸಿ.ಸುರೇಶ್‌ಬಾಬು ಒತ್ತಾಯಿಸಿದರು. ಕಾಂ.ಎಸ್.ಭಾಗ್ಯಮ್ಮ, ಕಾಂ. ಜಮುನಾಬಾಯಿ, ಕಾಂ.ಪಿ.ಕೆ.ವಿನೋದಮ್ಮ, ಕಾಂ.ಎಂ.ಸಾವಿತ್ರಮ್ಮ, ಕಾಂ.ರಾಧಮ್ಮ, ಕಾಂ.ಈ.ಸತ್ಯಕೀರ್ತಿ ಇನ್ನು ಮುಂತಾದವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.



## ಶಾಸಕ ಚಂದ್ರಪ್ಪ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಲಿ



» ಹೊಳಲ್ಕೆರೆ

ತಾಲ್ಲೂಕಿನ ಸಣ್ಣನೀರಾವರಿ ಇಲಾಖೆಯ ಭ್ರಷ್ಟಾಚಾರ ಖಂಡಿಸಿ ತಾಳಿಕಟ್ಟೆ ರೈತ ರೇವಣ್ಣ ಎಂಬುವವರು ಕಳೆದ ಎರಡು ದಿನಗಳಿಂದ ಹೊಳಲ್ಕೆರೆ ತಾಲ್ಲೂಕು ಕಚೇರಿ ಬಳಿ ಉಪವಾಸ ಸತ್ಯಗ್ರಹ ಆರಂಭಿಸಿದ್ದಾರೆ. ಇನ್ನೂ ಸೋಮವಾರ ದಿಂದ ಉಪವಾಸ ಸತ್ಯಾಗ್ರಹವನ್ನು ಮಧ್ಯಾಹ್ನ 12 ಗಂಟೆಗೆ ನಡೆಡಸಿದ ಅವರು ಹೊಳಲ್ಕೆರೆ ತಾಲ್ಲೂಕು ರಾಮಗಿರಿ ಹೋಬಳಿ ವಡೆರಹಳ್ಳಿಯಲ್ಲಿ ಸಣ್ಣ ನೀರಾವರಿ ಇಲಾಖೆಯವರು ತಾಳಿಕಟ್ಟೆ ಗ್ರಾಮದ ವಡೇರಹಳ್ಳಿ ಕೆರೆ ಅಭಿವೃದ್ಧಿಯಾಗದೆ 60 ಲಕ್ಷ ರೂ. ಅಕ್ರಮ ಮಾಡಿದ್ದಾರೆ. ಈ ಬಗ್ಗೆ ಜಿಲ್ಲಾಡಳಿತ ಸೂಕ್ತ ತನಿಖೆ ನಡೆಸಿ ಚಳ್ಳಕೆರೆ ತಾಲ್ಲೂಕು ಗುತ್ತಿಗೆದಾರ ಮತ್ತು ೦ಇಇ ಇವರ ವಿರುದ್ಧ ಸರ್ಕಾರ ಮತ್ತು ಜಿಲ್ಲಾಡಳಿತ ಕ್ರಿಮಿನಲ್ ಕೇಸು ದಾಖಲಿಸಬೇಕೆಂದು ಮತ್ತು ಇವರ ಪರವಾನಿಗೆಯನ್ನು ಕಪ್ಪು ಪಟ್ಟಿಗೆ ಸೇರಿಸಬೇಕೆಂದು.


ಪುಟ 2


## ಪ್ರಮುಖ ಸುದ್ದಿ

### ಸಂಚಾರಿ ನಿಯಮಗಳ ಉಲ್ಲಂಘನೆಯಿಂದ ಅಪಘಾತಗಳ ಜೊತೆಗೆ ಪ್ರಾಣಹಾನಿ

# ಸಂಚಾರಿ ನಿಯಮಗಳ ಪಾಲಿಸಿ ಅಮೂಲ್ಯವಾದ ಜೀವ ರಕ್ಷಿಸಿಕೊಳ್ಳಿ

» ಚಳ್ಳಕೆರೆ

ಸಂಚಾರಿ ನಿಯಮಗಳ ಉಲ್ಲಂಘನೆಯಿಂದ ಅಪಘಾತಗಳ ಹೆಚ್ಚಿ ಪ್ರಾಣಹಾನಿ ಆಗುತ್ತಿದೆ ನಿಯಮಗಳ ಪಾಲಿಸಿ ಅಮೂಲ್ಯವಾದ ಜೀವ ರಕ್ಷಿಸಿಕೊಳ್ಳಿ ಎಂದು ಉಪವಿಭಾಗದ ಡಿವೈಎಸ್ಪಿ ಟಿ.ಬಿ.ರಾಜಣ್ಣ ತಿಳಿಸಿದರು.

ಅವರು, ಮಂಗಳವಾರ ನಗರದ ಬಿಎಂ ಸರ್ಕಾರಿ ಪ್ರೌಢಶಾಲಾ ಮುಂಭಾಗದಲ್ಲಿ ಹೆಗ್ಗೆರೆ ತಾಯಮ್ಮ, ಬಿಎಂ ಪ್ರೌಢಶಾಲೆ ವಿದ್ಯಾರ್ಥಿಗಳ ಸಹಯೋಗದೊಂದಿಗೆ ರಾಷ್ಟ್ರೀಯ ರಸ್ತೆ ಸುರಕ್ಷಿತ ಮಾಸ ಅಂಗವಾಗಿ ಹಮ್ಮಿಕೊಂಡಿದ್ದ ಸಡಕ್ ಸುರಕ್ಷ–ಜೀವನ್‌ರಕ್ಷ ಜಾಥಕ್ಕೆ ಹಸಿರು ಬಾವುಟ ತೋರಿಸಿ ಚಾಲನೆ ನೀಡಿ ಮಾತನಾಡಿದರು. ಪ್ರತಿವರ್ಷ ನೂರಾರು ಅಪಘಾತಗಳು, ಸಾವಿರಾರು ಗಾಯಾಳುಗಳು, ನೂರಾರು ಸಂಖ್ಯೆಯ ಸಾವುಗಳು ನಮ್ಮ ಕಣ್ಣಮುಂದೆ ಸಂಭವಿಸುತ್ತಿದ್ದರೂ ಅವುಗಳ ನಿಯಂತ್ರಣದ ಬಗ್ಗೆ ಪೊಲೀಸ್ ಇಲಾಖೆ ಹಮ್ಮಿಕೊಳ್ಳುವ ಕಾರ್ಯಕ್ರಮಗಳಿಗೆ ಸಾರ್ವಜನಿಕರು ಸಹಕಾರ ನೀಡುವುದಲ್ಲದೆ, ಸಂಚಾರಿ ನಿಯಮಗಳನ್ನು ಅಳವಡಿಸಿಕೊಳ್ಳುವತ್ತ ಹೆಚ್ಚು ಗಮನ ನೀಡಬೇಕೆಂದರು.







ವೃತ್ತ ನಿರೀಕ್ಷಕ ರಾಜಫಕೃದ್ದೀನ್ ದೇಸಾಯಿ ಮಾತನಾಡಿ, ಎಲ್ಲೆ ಅಪಘಾತ ಸಂಭವಿಸಲಿ ಕೂಡಲೇ ಸಾರ್ವಜನಿಕರು ಗಾಯಾಳುಗಳನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಲು ಮುಂದಾಗಬೇಕು. ಪೊಲೀಸ್ ಇಲಾಖೆಯೂ ಸಹ ಅಪಘಾತದ ಸಂದರ್ಭದಲ್ಲಿ ಕೂಡಲೇ ಕಾಯೋನ್ಮುಖವಾಗುತ್ತದೆ. ವಿಶೇಷವಾಗಿ ಮುಂಜಾನೆಯ ನಿದ್ದೆಮೊಂಪರಿನಲ್ಲಿ ಅಪಘಾತಗಳು ಸ್ವಾಭಾವಿಕ. ಆದ್ದರಿಂದ ಚಾಲಕರು ಸದಾಜಾಗ್ರತೆಯಿಂದ ವಾಹನ ಚಾಲನೆ ಮಾಡಬೇಕೆಂದರು. 2024ರ ಅವಧಿಯಲ್ಲಿ ಚಳ್ಳಕೆರೆ ಉಪವಿಭಾಗ ವ್ಯಾಪ್ತಿಯಲ್ಲಿ 1740 ಅಪಘಾತವಾಗಿದ್ದು, 488ಜನ ಮೃತಪಟ್ಟಿರುತ್ತಾರೆ, 2020ಜನ ಗಾಯಗೊಂಡಿದ್ದಾರೆಂದರು.

ಪಿಎಸ್‌ಐ ಜೆ.ಶಿವರಾಜ್, ಧರೆಪ್ಪಬಾಳಪ್ಪದೊಡ್ಡಮನಿ, ಎಎಸ್‌ಐ ರವಿಕುಮಾರ್, ಮಂಜುನಾಥ, ಗೋವಿಂದರಾಜು, ಹೆಗ್ಗೆರೆ ತಾಯಮ್ಮ ಶಾಲೆಯ ಪ್ರಭಾರಮುಖ್ಯ ಶಿಕ್ಷಕಿ ವೇಣಿ, ಶಿಕ್ಷಕರಾದ ಬಿ.ರಾಜ್‌ಕುಮಾರ್, ಪ್ರಾಣೇಶ್, ಸುಜಾತ, ಪ್ರದೀಪ್, ಮುಖ್ಯಪೇದೆ ಗಂಗಮ್ಮ, ಗಿರಿಯಮ್ಮ, ಕವಿತಾ, ತಿಲಕ್‌ರಾಜ್, ಶಂಕರಣ್ಣ, ಬಸವರಾಜು, ಜಗದೀಶ್ ಮುಂತಾದವರು ಇದ್ದರು.

# 8,9ಕ್ಕೆ ರಾಜನಹಳ್ಳಿಯಲ್ಲಿ ವಾಲ್ಮೀಕಿ ಜಾತ್ರೆ

## ಎಲ್ಲಾ ಸಿದ್ಧತೆಯನ್ನು ಅಚ್ಚುಕಟ್ಟಾಗಿ ಆಯೋಜಿಸಲು ಎಲ್ಲಾ ಇಲಾಖೆ ಅಧಿಕಾರಿಗಳು ಕರ್ತವ್ಯ ನಿರ್ವಹಿಸಲು ಸೂಚನೆ



» **ದಾವಣಗೆರೆ**

ರಾಜನಹಳ್ಳಿ ಮಹರ್ಷಿ ವಾಲ್ಮೀಕಿ ಗುರುಪೀಠದಲ್ಲಿ ಫೆಬ್ರುವರಿ 8 ಮತ್ತು 9 ರಂದು ಮಹರ್ಷಿ ವಾಲ್ಮೀಕಿ ನಡೆಯಲಿರುವುದರಿಂದ ಈ ಸಂದರ್ಭದಲ್ಲಿ ಲಕ್ಷಾಂತರ ಭಕ್ತರು ಬಂದು ಹೋಗುತ್ತಾರೆ. ಆಗಮಿಸುವ ಭಕ್ತರಿಗೆ ಅಗತ್ಯ ಮೂಲಭೂತ ಸೌಕರ್ಯ ಒದಗಿಸಲು ಎಲ್ಲಾ ಇಲಾಖೆ ಅಧಿಕಾರಿಗಳು ಶ್ರಮಿಸಬೇಕೆಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ತಿಳಿಸಿದರು.

ಅವರು ಮಂಗಳವಾರ ಶ್ರೀಮಠದಲ್ಲಿ ನಡೆದ ಜಾತ್ರಾ ಮಹೋತ್ಸವ ಪೂರ್ವಭಾವಿ ಸಭೆಯಲ್ಲಿಅಧ್ಯಕ್ಷತೆವಹಿಸಿಮಾತನಾಡಿದರು. ಹೆಚ್ಚು ಜನರು ಬರುವುದರಿಂದ ಜನರ ಆರೋಗ್ಯ ಮತ್ತು ನೈರ್ಮಲ್ಯತೆಯನ್ನು ಕಾಪಾಡುವುದು ಬಹಳ ಮುಖ್ಯವಾಗಿದೆ. ಆರೋಗ್ಯ ಇಲಾಖೆಯಿಂದ ಇಲ್ಲಿಗೆ ಮೊಬೈಲ್ ತಂಡವನ್ನು ನಿಯೋಜಿಸಲು ಮತ್ತು ಅಂಬುಲೆನ್ಸ್‌ನ್ನು ಇಲ್ಲಿಯೇ ಕಾಯ್ದಿರಿಸಲು ಸೂಚನೆ ನೀಡಿ ಅಗತ್ಯ ಔಷಧ ದಾಸ್ತಾನಿಡಲು ಸೂಚನೆ ನೀಡಿದರು.

**ಕುಡಿಯುವ ನೀರು;** ಹೆಚ್ಚು ಜನರು ಆಗಮಿಸುವುದರಿಂದ ಕುಡಿಯುವ ನೀರಿನ ವ್ಯವಸ್ಥೆ ಮಾಡಲು ಹಾಗೂ ತಿಳಿಸಿ ನೈರ್ಮಲ್ಯತೆ ಕಾಪಾಡಲು ಮೊಬೈಲ್ ಶೌಚಾಲಯದ ಜೊತೆಗೆ ಇಲ್ಲಿಗೆ ಬೇಕಾದ ನೀರು ಪೂರೈಕೆ ಮಾಡಿಕೊಡಲು ಇಂಜಿನಿಯರಿಂಗ್ ವಿಭಾಗದವರಿಗೆ ತಿಳಿಸಿದರು.

**ನಿರಂತರ ವಿದ್ಯುತ್ ಪೂರೈಕೆ;** ಜಾತ್ರಾ ಸಂದರ್ಭದಲ್ಲಿ ಅನಿಯಮಿತ ವಿದ್ಯುತ್ ಪೂರೈಕೆಗಾಗಿ ಹೆಚ್ಚುವರಿಯಾಗಿ ಮೊಬೈಲ್ ಟಿಸಿಗಳ ದಾಸ್ತಾನಿಟ್ಟುಕೊಳ್ಳಬೇಕು. ವಿದ್ಯುತ್ ಪೂರೈಕೆಗೆ ಅಡಚಣೆಯಾಗಿರುವ ಗಿಡ, ಮರಗಳ ಕೊಂಬೆಗಳನ್ನು ಈಗಲೇ ತಂತಿ ಮೇಲೆ ಬೀಳದಂತೆ ನೋಡಿಕೊಳ್ಳಲು ನಿರಂತರ ವಿದ್ಯುತ್ ಪೂರೈಕೆಗಾಗಿ ಎಷ್ಟು ಕೆವಿ ವಿದ್ಯುತ್ ಪೂರೈಕೆಯ ಅವಶ್ಯಕತೆ ಇದೆ ಎಂದು ಅಂದಾಜಿಸಿಕೊಳ್ಳಲು ಮತ್ತು ಯಾವುದೇ ಅವಘಡಗಳು ಸಂಭವಿಸದಂತೆ ಎಲೆಕ್ಟ್ರಿಕಲ್ ಇನ್ಸ್‌ಪೆಕ್ಟರ್‌ಗಳಿಂದ ಜಾತ್ರಾ ಪೂರ್ವದಲ್ಲಿ ಪರೀಕ್ಷೆ ನಡೆಸಲು ಬೆಸ್ಕಾಂ ಅಧಿಕಾರಿಗಳಿಗೆ ಸೂಚನೆ ನೀಡಿದರು.

**ವಾಹಗಳ ನಿಲುಗಡೆ;** ಜಾತ್ರೆಯ ವೇಳೆ ಬರುವ ವಾಹನಗಳನ್ನು ಎರಡು ಕಿ.ಮೀ ದೂರದಲ್ಲಿಯೇ ನಿಲುಗಡೆ ಮಾಡಲು ಸೂಚನೆ ನೀಡಲಾಗುತ್ತಿತ್ತು. ಮಠದ ಆವರಣಕ್ಕೆ ಬರಲು ಸಾಕಷ್ಟು ದೂರವಾಗುವುದರಿಂದ ಹತ್ತಿರದವರೆಗೆ ವಾಹನಗಳು ಬಂದು, ನಂತರ ಮುಂದೆ ಹೋಗಿ ನಿಲುಗಡೆ ಮಾಡಲು ಪರಿಶೀಲನೆ ನಡೆಸಲಾಗುತ್ತದೆ ಎಂದರು.

ಶಾಸಕರು ಹಾಗೂ ಜಾತ್ರಾ ಸಮಿತಿಯ ಅಧ್ಯಕ್ಷರಾದ ಬಿ.ದೇವೇಂದ್ರಪ್ಪ ಚಿಕ್ಕಮ್ಮನಹಟ್ಟಿ ರವರು ಮಾತನಾಡಿ ವಾಲ್ಮೀಕಿ ಜಾತ್ರೆಯ ಸಂಪೂರ್ಣ ವ್ಯವಸ್ಥೆಯನ್ನು ಜಿಲ್ಲಾಡಳಿತ ಮಾಡಿಕೊಡಲಿದೆ. ಜಾತ್ರೆ ಎಂಬುದು ಧಾರ್ಮಿಕ ಪ್ರಕ್ರಿಯೆಯಾಗಿದ್ದರೂ ಸಮುದಾಯದ ಜನರನ್ನು ಒಂದೆಡೆ ಸೇರಿಸಿ ಸಮಾಲೋಚನೆ, ಜಾಗೃತಿ ಮೂಡಿಸುವ, ಸಂಘಟನೆ ಮಾಡುವ ಉದ್ದೇಶವಿದೆ. ಭಕ್ತಾಧಿಗಳಿಗೆ ಎಲ್ಲಾ ರೀತಿ ಮೂಲಭೂತ ಸೌಕರ್ಯ ಕಲ್ಪಿಸಲು ಹಾಗೂ ಜಾತ್ರೆ ಸುಗಮವಾಗಿ ನಡೆಯಲು ಎಲ್ಲರ ಸಹಕಾರ ಪ್ರಮುಖವಾಗಿದೆ ಎಂದರು.

ನಾಡಿನಾದ್ಯಂತ ಇರುವ ಸಮುದಾಯದ ಜನರ ಸಂಘಟನೆಯೇ ಮಹರ್ಷಿ ವಾಲ್ಮೀಕಿ ಜಾತ್ರೆಯ ಮೂಲ ಉದ್ದೇಶ ಎಂದು ಸಾನಿಧ್ಯ ವಹಿಸಿದ್ದ ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಡಾ; ವಾಲ್ಮೀಕಿ ಪ್ರಸನ್ನಾನಂದ ಸ್ವಾಮೀಜಿಯವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಸುರೇಶ್ ಬಿ.ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಧರ್ಮದರ್ಶಿ ಶಾಂತಲಾ ರಾಜಣ್ಣ, ಮುಖಂಡರಾದ ಹೊದಿಗೆರೆ ರಮೇಶ್, ಸಂಚಾಲಕರಾದ ಶ್ರೀನಿವಾಸ ದಾಸಕರಿಯಪ್ಪ ಹಾಗೂ ಇನ್ನಿತರೆ ಮುಖಂಡರು, ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

**ಫೆ.8ರ ಕಾರ್ಯಕ್ರಮ:** ಪೀಠಾಧಿಪತಿ ಪ್ರಸನ್ನಾನಂದ ಸ್ವಾಮೀಜಿ ಸಾನ್ನಿಧ್ಯದಲ್ಲಿ ಫೆ.8 ರಂದು ಬೆಳಿಗ್ಗೆ 7ಕ್ಕೆ ರಾಜನಹಳ್ಳಿ ಗ್ರಾಮದಿಂದ ಶ್ರೀಮಠದವರೆಗೆ ಶ್ರೀ ಮಹರ್ಷಿ ವಾಲ್ಮೀಕಿ ಭಾವಚಿತ್ರದ ಮೆರವಣಿಗೆ ನಡೆಯಲಿದೆ. ನಂತರ ಹರಹರ ಶಾಸಕರಾದ ಬಿ ಪಿ ಹರೀಶ್ ಧ್ವಜಾರೋಹಣ ನೆರವೇರಿಸುವರು. ಜಾತ್ರಾ ಸಮಿತಿ ಅಧ್ಯಕ್ಷ ಚಿಕ್ಕಮ್ಮನಹಟ್ಟಿ ಬಿ. ದೇವೇಂದ್ರಪ್ಪ , ಸಮಿತಿ ಸಂಚಾಲಕ ಶ್ರೀನಿವಾಸ ದಾಸಕರಿಯಪ್ಪ ಗುರುಪೀಠದ ಆಡಳಿತಾಧಿಕಾರಿ ಟಿ.ಓಬಳಪ್ಪ ಮಠದ ಧರ್ಮದರ್ಶಿಗಳು ಉಪಸ್ಥಿತರಿರುವರು.

8.30ಕ್ಕೆ ಸರ್ವಧರ್ಮ ಸಾಮೂಹಿಕ ವಿವಾಹ ಮಹೋತ್ಸವ, ಉದ್ಯೋಗ ಮೇಳ, ಕೃಷಿ ವಸ್ತು ಪ್ರದರ್ಶನ, ಫಲಪುಷ್ಪ ಪ್ರದರ್ಶನ ಮೇಳದ ಉದ್ಘಾಟನೆಯನ್ನು ಸಂಸದರಾದ ಪ್ರಭಾ ಮಲ್ಲಿಕಾರ್ಜುನ ಮಾಡುವರು. ನಂತರ ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.30ರ ವರೆಗೆ ಮಹಿಳಾ ಗೋಷ್ಠಿ, ಸಾಧಕ ಮಹಿಳೆಯರಿಗೆ ಗೌರವ ಸಮರ್ಪಣೆ, ಮಧ್ಯಾಹ್ನ 2.30ರಿಂದ ಸಂಜೆ 5.30ರ ವರೆಗೆ ನೌಕರರ ಗೋಷ್ಠಿ, ಸಂಜೆ 5.30 ರಿಂದ 8. ವರೆಗೆ ಪರಿಶಿಷ್ಠ ಪಂಗಡ ಬುಡಕಟ್ಟು ಸಮುದಾಯಗಳ ಕಾನೂನಿನ ಅರಿವು ವಿಷಯ ಕುರಿತು ಸಂಘಟನಾ ಗೋಷ್ಠಿ ಉದ್ಘಾಟನೆಯನ್ನು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರಾದ ಹೆಚ್ ಕೆ ಪಾಟೀಲ್ ನೆರವೇರಿಸುವರು. ರಾತ್ರಿ 8 ರಿಂದ ರಸಮಂಜರಿ ಕಾರ್ಯಕ್ರಮ ನಡೆಯಲಿದೆ. ರಾತ್ರಿ 10.30ರಿಂದ ರಾಮಾಯಣ ನಾಟಕ ಪ್ರದರ್ಶನ ನಡೆಯಲಿದೆ.

**ಫೆ.9ರ ಕಾರ್ಯಕ್ರಮ:** ಬೆಳಿಗ್ಗೆ 6ರಿಂದ 7ರ ವರೆಗೆ ಸ್ವಚ್ಛತಾ ಕಾರ್ಯದ ನಂತರ ಬೆಳಿಗ್ಗೆ 9ಕ್ಕೆ 63 ಅಡಿ ಎತ್ತರದ ಭವ್ಯ ತೇರಿನ ರಥೋತ್ಸವ, ಬೆಳಿಗ್ಗೆ 9.30ರಿಂದ ನಡೆಯುವ ಧರ್ಮ ಸಭೆಯಲ್ಲಿ ನಾಡಿನ ವಿವಿಧ ಮಠಾಧೀಶರು ಭಾಗವಹಿಸುವರು. ನಂತರ ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ ನಡೆಯಲಿದೆ.

ಮಧ್ಯಾಹ್ನ 12.30ರಿಂದ ನಡೆಯುವ ಜನ ಜಾಗೃತಿ ಜಾತ್ರಾ ಮಹೋತ್ಸವವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸುವರು. ಜಾತ್ರಾ ಸಮಿತಿ ಅಧ್ಯಕ್ಷ ಚಿಕ್ಕಮ್ಮನಹಟ್ಟಿ ಬಿ. ದೇವೇಂದ್ರಪ್ಪ ಅಧ್ಯಕ್ಷತೆ ವಹಿಸುವರು. ಡಿಸಿಎಂ ಡಿ.ಕೆ.ಶಿವಕುಮಾರ್, ಮಾಜಿ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ, ಎಚ್.ಡಿ.ಕುಮಾರಸ್ವಾಮಿ, ವಿಪಕ್ಷ ನಾಯಕ ಆರ್.ಅಶೋಕ್ ಹಾಗೂ ಹಾಲಿ, ಮಾಜಿ ಸಚಿವರು, ಸಂಸದರು, ಶಾಸಕರು, ಮುಖಂಡರು ಭಾಗವಹಿಸುವರು. ಕಾರ್ಯಕ್ರಮದಲ್ಲಿ ವಾಲ್ಮೀಕಿ ರತ್ನ ಪ್ರಶಸ್ತಿ, ಮದಕರಿ ನಾಯಕ ಪ್ರಶಸ್ತಿ ಪ್ರಧಾನ ಸಮಾರಂಭ ನಡೆಯಲಿದೆ. ಅನ್ನ ದಾಸೋಹಕ್ಕಾಗಿ ಊಟದ ಕೌಂಟರ್ ವ್ಯವಸ್ಥೆ ಮಾಡಲಾಗಿದೆ.

ಹಲವು ಸಚಿವರು, ಮಾಜಿ ಮುಖ್ಯಮಂತ್ರಿಗಳು, ಶಾಸಕರು, ನಾಡಿನ ವಿವಿಧ ಮಠಾಧೀಶರು, ಚಿಂತಕರು, ಸಾಹಿತಿಗಳು, ಲೇಖಕರು, ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಜಾತ್ರಾ ಸಮಿತಿ ಮಹೋತ್ಸವದಲ್ಲಿ ಭಾಗವಹಿಸುವರು.

# ನಗರದ ರಸ್ತೆಗಳನ್ನು ಶೀಘ್ರ ವಿಸ್ತರಣೆಗೆ ಮನವಿ

» **ಚಿತ್ರದುರ್ಗ**



ದಾವಣಗೆರೆ ರಸ್ತೆ ಹಾಗೂ ಮೆದೇಹಳ್ಳಿ ರಸ್ತೆಗಳನ್ನು ತುರ್ತಾಗಿ ಅಗಲೀಕರಣಗೊಳಿಸಿ ಪಾದಚಾರಿಗಳ, ವಾಹನಗಳ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸುವಂತೆ ಜಯ ಕರ್ನಾಟಕ ಜನಪರ ವೇದಿಕೆಯಿಂದ ಅಪರ ಜಿಲ್ಲಾಧಿಕಾರಿಗೆ ಮಂಗಳವಾರ ಮನವಿ ಸಲ್ಲಿಸಲಾಯಿತು.

ಚಳ್ಳಕೆರೆ ರಸ್ತೆಯಿಂದ ಗಾಂಧಿ ವೃತ್ತದ ಮುಖಾಂತರ ಕನಕ ಸರ್ಕಲ್‌ವರೆಗೆ ರಸ್ತೆ ಅಗಲೀಕರಣಕ್ಕೆ ಜಿಲ್ಲಾಧಿಕಾರಿಗಳು ಈಗಾಗಲೆ ಸಭೆ ನಡೆಸಿದ್ದಾರೆ. ಐತಿಹಾಸಿಕ ಏಳು ಸುತ್ತಿನ ಕೋಟೆಗೆ ಪ್ರಸಿದ್ದಿ ಪಡೆದಿರುವ ಚಿತ್ರದುರ್ಗದಲ್ಲಿ ಎಲ್ಲಾ ರಸ್ತೆಗಳು ಕಿಷ್ಕಿಂದೆಯಾಗಿದ್ದು, ಸಂಚಾರಕ್ಕೆ ಕಿರಿಕಿರಿಯಾಗುತ್ತಿರುವುದರಿಂದ ದಾವಣಗೆರೆ ರಸ್ತೆ, ಹೊಳಲ್ಕೆರೆ ರಸ್ತೆ ಹಾಗೂ ಮೆದೆಹಳ್ಳಿ ರಸ್ತೆಗಳನ್ನು ಅಗಲೀಕರಣಗೊಳಿಸಿದರೆ ಊರಿಗೆ ಸುಂದರ ರೂಪ ಕೊಟ್ಟಂತಾಗುತ್ತದೆ. ಇರುವ ರಸ್ತೆಯಲ್ಲಿಯೇ ಪಾದಚಾರಿಗಳು, ಬಸ್, ಲಾರಿ, ಕಾರು, ಆಟೋ, ದ್ವಿಚಕ್ರವಾಹನಗಳು ದಿನನಿತ್ಯವೂ ಸಂಚರಿಸುತ್ತಿವೆ. ತುರ್ತು ಚಿಕಿತ್ಸೆಗಾಗಿ ರೋಗಿಗಳನ್ನು ಸಾಗಿಸುವ ಅಂಬ್ಯುಲೆನ್ಸ್ ವಾಹನ ಚಾಲಕರುಗಳು ಸಂಚಾರ ದಟ್ಟಣೆಯಿಂದ ಪಜೀತಿ ಪಡುತ್ತಿರುವುದು ಸರ್ವೆ ಸಾಮಾನ್ಯವಾಗಿರುವುದರಿಂದ ಈ ವಿಚಾರವನ್ನು ನಿರ್ಲಕ್ಷಿಸದೆ ಕೂಡಲೆ ರಸ್ತೆ ಅಗಲೀಕರಣಗೊಳಿಸುವಂತೆ ಜಿಲ್ಲಾಡಳಿತವನ್ನು ವಿನಂತಿಸಲಾಯಿತು.ಜಯ ಕರ್ನಾಟಕ ಜನಪರ ವೇದಿಕೆ ಜಿಲ್ಲಾಧ್ಯಕ್ಷ ಬಿ.ಟಿ.ರಾಜೇಂದ್ರ, ಉಪಾಧ್ಯಕ್ಷ ದೇವರಾಜ ಅರಸ್, ಕಾರ್ಯದರ್ಶಿ ಟಿ.ಗಿರೀಶ, ತಾಲ್ಲೂಕು ಕಾರ್ಯಾಧ್ಯಕ್ಷ ನಿರಂಜನ್,ಅಧ್ಯಕ್ಷ ಬಿ.ಅಶೋಕ ಸೇರಿದಂತೆ ವೇದಿಕೆ ಪದಾಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಅಭಿವೃದ್ಧಿಯೇ ನನ್ನ ಗುರಿ, ಮಾದರಿ ಕ್ಷೇತ್ರವನ್ನಾಗಿ ಮಾಡುವೆ: ಶಾಸಕ



» **ಚನ್ನಗಿರಿ**

ಕ್ಷೇತ್ರವನ್ನು ರಾಜ್ಯದಲ್ಲಿಯೇ ಮಾದರಿ ಕ್ಷೇತ್ರವನ್ನಾಗಿ ಮಾಡುವ ಸಂಕಲ್ಪ ಹೊಂದಿದ್ದೇನೆ. ಅಭಿವೃದ್ಧಿ ಮಾಡುವುದೇ ನನ್ನ ಗುರಿಯಾಗಿದೆ ಎಂದು ಶಾಸಕರಾದ ಬಸವರಾಜು ವಿ ಶಿವಗಂಗಾ ತಿಳಿಸಿದರು. ತಾಲ್ಲೂಕಿನ ಕೆರೆಬಿಳಚಿ ಗ್ರಾಮದ ಅಲ್ಪಸಂಖ್ಯಾತ ಮೊರಾರ್ಜಿ ದೇಸಾಯಿ ವಸತಿ ಶಾಲಾ ಆವರಣದಲ್ಲಿ ನೂತನ ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಾಣದ ಕಾಮಗಾರಿಗೆ ಶಂಕುಸ್ಥಾಪನೆ ನೇರವೇರಿಸಿ ಮಾತನಾಡಿದ ಅವರು ನನ್ನ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸಾಕಷ್ಟು ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿವೆ. ನನ್ನ ಅಧಿಕಾರದ ಅವಧಿಯಲ್ಲಿ ಮಾದರಿ ತಾಲ್ಲೂಕು ಮಾಡುವ ಕನಸಿದೆ ಎಂದರು. ತಾಲ್ಲೂಕಿನ ಶೈಕ್ಷಣಿಕ ಪ್ರಗತಿ ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿದೆ. ಬಡ ವಿದ್ಯಾರ್ಥಿಗಳು ಹೆಚ್ಚಿನದಾಗಿ ವಸತಿ ಶಾಲೆಗಳಿಗೆ ಅರ್ಜಿ ಹಾಕುತ್ತಿದ್ದಾರೆ. ಬಡ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ದೊರೆಯಬೇಕೆಂಬುದು ನನ್ನ ಆಸೆ. ಈ ಕಾರಣ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಬರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಜಿ+4 ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಾಣಕ್ಕೆ ಶಂಕು ಸ್ಥಾಪನೆ ಮಾಡಲಾಗಿದೆ. ಸುಸಜ್ಜಿತ ಕಟ್ಟಡ ನಿರ್ಮಾಣ ಮಾಡಿ ಬಡ ಮಕ್ಕಳಿಗೆ ಉತ್ತಮ ವಸತಿಯೊಂದಿಗೆ ಶಿಕ್ಷಣ ಒದಗಿಸಲಾಗುವುದು ಎಂದರು.

ಈ ವೇಳೆ ಗ್ರಾಮ ಪಂಚಾಯ್ತಿಯ ಅಧ್ಯಕ್ಷರು, ಸದಸ್ಯರು ಹಾಗೂ ಪಕ್ಷದ ಮುಖಂಡರು ಮತ್ತು ವಸತಿ ನಿಲಯದ ಪ್ರಾಚಾರ್ಯರು ಸಿಬ್ಬಂದಿಗಳು, ಕಾಂಗ್ರೆಸ್ ಮುಖಂಡರುಗಳು ಉಪಸ್ಥಿತರಿದ್ದರು.

## 5 ಕಿ.ಮೀ ಒಳಗೆ ಉಚಿತ ಸರಬರಾಜು

**ಬಳ್ಳಾರಿ:** ಜಿಲ್ಲೆಯಲ್ಲಿನ ಎಲ್ಲಾ ಅನಿಲ ವಿತರಕರು, ಗೃಹ ಬಳಕೆಯ ಭರ್ತಿ ಮಾಡಿದ ಅನಿಲ ಸಿಲಿಂಡರ್‌ಗಳನ್ನು ಗ್ರಾಹಕರಿಗೆ ಸಾಗಾಣಿಕೆ ಮಾಡುವಾಗ 5 ಕಿ.ಮೀ ಒಳಗೆ ಉಚಿತವಾಗಿ ಸರಬರಾಜು ಮಾಡಬೇಕು ಎಂದು ಆಹಾರ ನಾಗರಿಕ ಸರಬರಾಜು ಮತ್ತು ವ್ಯವಹಾರಗಳ ಇಲಾಖೆಗಳ ಉಪನಿರ್ದೇಶಕ ಸಕೀನಾ ಅವರು ತಿಳಿಸಿದ್ದಾರೆ. 5 ಕಿ.ಮೀ ನಂತರದ ಪ್ರತಿ ಕಿ.ಮೀ ರೌಂಡ್ ಟ್ರಿಪ್ ಗೆ ಪ್ರತಿ ಸಿಲಿಂಡರ್‌ಗೆ ರೂ.1.60 ತೆಗೆದುಕೊಳ್ಳಬೇಕು.

## ಅಂತಿಮ ಆಯ್ಕೆ ಪಟ್ಟಿ ಪ್ರಕಟ

**ಚಿಕ್ಕಮಗಳೂರು:** ಜಿಲ್ಲಾ ಕಂದಾಯ ಘಟಕದ 23 ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಂಬಂಧ 1:1 ರಂತೆ 23 ಅರ್ಹ ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿ, ಹೆಚ್ಚುವರಿ ಆಯ್ಕೆ ಪಟ್ಟಿ ಹಾಗೂ ಅಂತಿಮ ಆಯ್ಕೆ ಪಟ್ಟಿ ಕಟ್ ಆಫ್ ಅಂಕಗಳನ್ನು ಚಿಕ್ಕಮಗಳೂರು ಜಿಲ್ಲಾ ವೆಬ್ ಸೈಟ್ <https:// chikkamagaluru.nic.in> ನಲ್ಲಿ ಪ್ರಕಟಿಸಲಾಗಿದೆ.

## ಫಾಸ್ಟ್ ನ್ಯೂಸ್

### 29ಕ್ಕೆ ಜಿಲ್ಲಾ ವಕೀಲರ ಸಂಘದಿಂದ ಲೀಕ್‌ಔಟ್ ಕಥನ ಪ್ರದರ್ಶನ

» **ದಾವಣಗೆರೆ**

ಜಿಲ್ಲಾ ವಕೀಲರ ಸಂಘ, ದಾವಣಗೆರೆ ಆಯೋಜಿಸಿರುವ ಚಾನೆಲ್ ಥೀಯೇಟರ್ಸ್ ಪಾಂಡವಪುರ ವತಿಯಿಂದ ಅಕ್ಷತಾ ಪಾಂಡಪುರ ಇವರ ಲೀಕ್ ಔಟ್ ಕಥನ ಪ್ರದರ್ಶನ ಜ.29ರಂದು ಸಂಜೆ 4ಕ್ಕೆ ದಾವಣಗೆರೆಯ ವಕೀಲರ ಸಾಂಸ್ಕೃತಿಕ ಸಮುದಾಯ ಭವನದಲ್ಲಿ ನಡೆಯಲಿದೆ. ಪ್ರದರ್ಶನವನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ಉದ್ಘಾಟಿಸುವರು. ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣ್‌ಕುಮಾರ್ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಂಜಪ್ಪ ಹನುಮಂತಪ್ಪ ಅಣ್ಣಯ್ಯನವರ, 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಆರ್.ಎನ್.ಪ್ರವೀಣ್‌ಕುಮಾರ್, ಎಸ್‌ಟಿಎಫ್‌ಸಿ–1, ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಶ್ರೀರಾಮ ನಾರಾಯಣ ಹೆಗಡೆ, ಜಿಲ್ಲಾ ಕೌಟುಂಬಿಕ ನ್ಯಾಯಾಧೀಶರಾದ ಶಿವಪ್ಪ ಗಂಗಪ್ಪ ಸಲಗರೆ, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರಾದ ಟಿ.ಎಂ.ನಿವೇದಿತಾ, ಹಿರಿಯ ಸಿವಿಲ್ ನ್ಯಾಯಾಧೀಶರು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣವರ ಆಗಮಿಸಲಿದ್ದಾರೆ.

### ಶಾಸಕ ಚಂದ್ರಪ್ಪ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಲಿ

» **ಮೊದಲ ಪುಟದಿಂದ**

ಉಪವಾಸ ಸತ್ಯಗ್ರಹಿ ರೇವಣ್ಣ ಒತ್ತಾಯಿಸಿದರು. ಈಗಾಗಲೆ ಕೆರೆ ಅಭಿವೃದ್ಧಿ ಹೆಸರಿನಲ್ಲಿ. ಸಾಕಷ್ಟು ಭ್ರಷ್ಟಾಚಾರ ನಡೆದಿದೆ ಎಂದು ಹಲವಾರು ಭಾರಿ ಇಲಾಖೆ ಮತ್ತು ಶಾಸಕರ ಗಮನಕ್ಕೆ ತಂದರು ಕ್ರಮ ವಹಿಸುತ್ತಿಲ್ಲ. ಇಲಾಖೆ ಅಧಿಕಾರಿಗಳು, ಜನಪ್ರತಿಗಳು, ಗುತ್ತಿಗೆದಾರರು ಕೆರೆ ಹಣವನ್ನು ದುರುಪಯೋಗ ಮಾಡಿಕೊಂಡಿದ್ದಾರೆ. ಕ್ಷೇತ್ರದ ಕಲ್ಯಾಣ ಶ್ರಮಿಸಬೇಕಿದ್ದ ಶಾಸಕರು ಈ ಬಗ್ಗೆ ಮಾತನಾಡದೆ ಮೌನವಾಗಿದ್ದಾರೆ. ಅಕ್ರಮ ಕುರಿತು ಕ್ರಮ ವಹಿಸುತ್ತಿಲ್ಲ. ಜನಪ್ರತಿನಿಧಿಯಾಗಿ ಇಲಾಖೆ ಭ್ರಷ್ಟಾಚಾರ ವಿರೋಧ ಮಾಡದೆ ಅವರ ಪರವಾಗಿ ನಿಂತಿದ್ದಾರೆ. ಅವರು ನೈತಿಕ ಹೊಣೆ ಹೊತ್ತು ರಾಜಿನಾಮೆ ನೀಡಬೇಕೆಂದು ಆಗ್ರಹಿದರು.

### ಬಂಜಾರ ಕಲಾವಿದರಿಂದ ಅರ್ಜಿ ಆಹ್ವಾನ

» **ದಾವಣಗೆರೆ**

ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಕಲಾ ಮಳಾವ್ ಕಾರ್ಯಕ್ರಮದಲ್ಲಿ ಭಾಗವಹಿಸುವ ಬಂಜಾರ ಕಲಾವಿದರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜನವರಿ 30 ಕೊನೆಯ ದಿನವಾಗಿರುತ್ತದೆ. ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ವಿ.ಎಸ್.ಅಲಗೂರ ಅರ್ಕೇಡ್ , 2ನೇ ಮಹಡಿ, ಹದಡಿ ರಸ್ತೆ ದಾವಣಗೆರೆ ಕಚೇರಿಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ: 9886791289, 9916013624 ಸಂಪರ್ಕಿಸಲು ನಿಗಮದ ಅಭಿವೃದ್ಧಿ ಅಧಿಕಾರಿ ತಿಳಿಸಿದ್ದಾರೆ.

### ದೇವದಾಸಿ ಸಮರ್ಪಣೆ ನಿಷೇಧ

» **ದಾವಣಗೆರೆ**

ಜನವರಿ 30 ರಂದು ಬೆಳಿಗ್ಗೆ 11 ಗಂಟೆಗೆ ಹರಿಹರದ ಬಸ್ ನಿಲ್ದಾಣದ ಹತ್ತಿರವಿರುವ ಗುರುಭವನದಲ್ಲಿ ದೇವದಾಸಿ ಸಮರ್ಪಣೆ ನಿಷೇಧ ಕುರಿತು ಮಾಜಿ ದೇವದಾಸಿ ಮಹಿಳೆಯರಿಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಾಜಾನಾಯ್ಕ ತಿಳಿಸಿದ್ದಾರೆ.

### ಚಿತ್ರದುರ್ಗ ಕನಕ ಪತ್ತಿನ ಸಹಕಾರ ಸಂಘದ ನಿರ್ದೇಶಕರಾಗಿ ಯೋಗೀಶ್ ಆಯ್ಕೆ.

» **ಚಿತ್ರದುರ್ಗ**

ನಗರದ ಸಹ್ಯಾದ್ರಿ ಇಂಗ್ಲಿಷ್ ಅಕಾಡೆಮಿಯ ಅಧ್ಯಕ್ಷರು ಹಾಗೂ ಉಪನ್ಯಾಸಕರಾದ ಯೋಗೀಶ್ ಸಹ್ಯಾದ್ರಿ ಚಿತ್ರದುರ್ಗ ಕನಕ ಪತ್ತಿನ ಸಹಕಾರ ಸಂಘದ ನಿರ್ದೇಶಕರಾಗಿ ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ. ದಿನಾಂಕ : 28/01/2025 ರಂದು ಕನಕ ಬ್ಯಾಂಕ್ ಅಧ್ಯಕ್ಷರಾದ ಲೋಕೇಶ್ ಕುಮಾರ್ ಹೆಚ್.ಎನ್ ಅವರ ಅಧ್ಯಕ್ಷತೆಯಲ್ಲಿ ನಡೆದ ಆಡಳಿತ ಮಂಡಳಿಯ ಸಭೆಯಲ್ಲಿ ಕನಕ ಪತ್ತಿನ ಸಹಕಾರ ಸಂಘದ ನಿರ್ದೇಶಕರಾಗಿ ಯೋಗೀಶ್ ಸಹ್ಯಾದ್ರಿ ಅವರು ಆಯ್ಕೆ ಆಗಿದ್ದು ಇವರಿಗೆ ಕನಕ ಬ್ಯಾಂಕ್‌ನ ಸರ್ವ ಸದಸ್ಯರು ಹಾಗೂ ಪದಾಧಿಕಾರಿಗಳು ಶುಭ ಕೋರಿದ್ದಾರೆ. ಇತ್ತೀಚೆಗೆ ಬಿಜೆಪಿ ಪಕ್ಷಕ್ಕೆ ಸೇರ್ಪಡೆಗೊಂಡಿದ್ದ ಯೋಗೀಶ್ ಸಹ್ಯಾದ್ರಿಯವರು, ಪ್ರಸ್ತುತ ಚಿತ್ರದುರ್ಗ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತು ಅಧ್ಯಕ್ಷರಾಗಿ ಹಾಗೂ ಚಿತ್ರದುರ್ಗ ತಾಲ್ಲೂಕು ಕುರುಬ ಸಂಘದ ಕಾರ್ಯದರ್ಶಿಯಾಗಿಯೂ ಕಾರ್ಯ ನಿರ್ವಹಿಸುತ್ತಿದ್ದಾರೆ.

**ಪ್ರಮುಖ ಸುದ್ದಿ**

# ಆರ್ಯವೈಶ್ಯ ಅಧಿಕಾರಿಗಳು ಮತ್ತು ವೃತ್ತಿನಿರತರ ಸಂಘದಿಂದ ಕೃಷ್ಣರಾಜೇಂದ್ರ ಗ್ರಂಥಾಲಯಕ್ಕೆ ತಾಂತ್ರಿಕ ಪದವಿ ಪುಸ್ತಕಗಳ ಹಸ್ತಾಂತರ

» **ಚಿತ್ರದುರ್ಗ**



ನಿರಂತರವಾಗಿ ಪುಸ್ತಕಗಳನ್ನು ಓದುವುದರಿಂದ ಜ್ಞಾನ ಹೆಚ್ಚಿಸಿಕೊಳ್ಳಬಹುದೆಂದು ಕೃಷ್ಣರಾಜೇಂದ್ರ ಗ್ರಂಥಾಲಯಾಧಿಕಾರಿ ಬಸವರಾಜ್‌ಕೊಳ್ಳಿ ತಿಳಿಸಿದರು.

ಆರ್ಯವೈಶ್ಯ ಅಧಿಕಾರಿಗಳು ಮತ್ತು ವೃತ್ತಿನಿರತರ ಸಂಘದಿಂದ ತಾಂತ್ರಿಕ ಪದವಿಯ ಅನೇಕ ಪುಸ್ತಕಗಳನ್ನು ಸ್ವೀಕರಿಸಿ ನಂತರ ಮಾತನಾಡಿದ ಅವರು ಸರ್ಕಾರಿ ನೌಕರಿ ಸಿಕ್ಕ ಕೂಡಲೆ ಓದುವುದನ್ನೆ ನಿಲ್ಲಿಸಿಬಿಡುವುದು ಸರಿಯಲ್ಲ. ಪುಸ್ತಕ ಓದುವುದಕ್ಕೆ ವಯಸ್ಸಿನ ಮಿತಿಯಿಲ್ಲ. ಎಲ್ಲಾ ವಯೋಮಾನದವರು ಪುಸ್ತಕಗಳನ್ನು ಓದುವುದರಿಂದ ಸಾಕಷ್ಟು ವಿಚಾರಗಳು ದೊರಕುತ್ತವೆ. ಗ್ರಂಥಾಲಯಗಳಲ್ಲಿ ಅನೇಕ ಮಹತ್ವದ ಪುಸ್ತಕಗಳಿರುವುದು ಬಡ ಮಕ್ಕಳ ಓದಿಗೆ ನೆರವಾಗುತ್ತಿದೆ ಎಂದು ಹೇಳಿದರು.

1925 ರಲ್ಲಿ ಆರಂಭಗೊಂಡ ಕೃಷ್ಣರಾಜೇಂದ್ರ ಗ್ರಂಥಾಲಯಕ್ಕೆ ಶತಮಾನದ ಇತಿಹಾಸವಿರುವುದರಿಂದ ವಿಜೃಂಭಣೆಯಿಂದ ಶತಮಾನೋತ್ಸವ ಆಚರಿಸಲಾಗುವುದು. ಚಿತ್ರದುರ್ಗ, ತುಮಕೂರು, ಬಳ್ಳಾರಿಗೆ ಗಣಿ ಹಣ ಬಂದಿದೆ. ಅದರಲ್ಲಿ ಚಿತ್ರದುರ್ಗದ ಗ್ರಂಥಾಲಯಕ್ಕೆ ಹತ್ತು ಕೋಟಿ 29 ಲಕ್ಷ ರೂ. ಮಂಜೂರಾಗಿದೆ. ಚಿತ್ರದುರ್ಗ ನಗರವೊಂದರಲ್ಲಿಯೇ ಆರು ಕೋಟಿ ರೂ.ಗಳನ್ನು ಖರ್ಚು ಮಾಡಿ ಬಯಲು ಗ್ರಂಥಾಲಯ, ಹೈಟೆಕ್ ಶೌಚಾಲಯಗಳನ್ನು ನಿರ್ಮಿಸಲಾಗುವುದು. ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿಯೂ ಗ್ರಂಥಾಲಯಕ್ಕೆ ಗಣಿ ಹಣವನ್ನು ಬಳಸಲಾಗುವುದು ಎಂದರು.

ಆರ್ಯವೈಶ್ಯ ಅಧಿಕಾರಿಗಳು ಮತ್ತು ವೃತ್ತಿನಿರತರ ಸಂಘದ ಅಧ್ಯಕ್ಷ ಪಿ.ಎಲ್.ಸುರೇಶ್‌ರಾಜು ಮಾತನಾಡಿ ಎಂ.ಎಸ್.ಗಿರೀಶ್‌ರವರ ಪುತ್ರ ಓದಿ ತಾಂತ್ರಿಕ ಪದವಿ ಪಡೆದ ಪುಸ್ತಕವನ್ನು ಗ್ರಂಥಾಲಯಕ್ಕೆ ನೀಡಲಾಗಿದೆ. ಮುಂದಿನ ಮೂವತ್ತು ದಿನಗಳಲ್ಲಿ ನಮ್ಮ ಸಂಘದಿಂದ ಒಂದು ಸಾವಿರ ಪುಸ್ತಕಗಳನ್ನು ನೀಡಲಾಗುವುದು. ಇದರಿಂದ ಬಡ ಮಕ್ಕಳ ಓದಿಗೆ ಅನುಕೂಲವಾಗಲಿ ಎಂದು ಹೇಳಿದರು.

ಆರ್ಯವೈಶ್ಯ ಅಧಿಕಾರಿಗಳು ಮತ್ತು ವೃತ್ತಿನಿರತರ ಸಂಘದ ಕಾರ್ಯದರ್ಶಿ ಡಿ.ಆರ್.ತಿಪ್ಪೇಸ್ವಾಮಿ, ಮಾಜಿ ಅಧ್ಯಕ್ಷ ಪಿ.ಎನ್.ಮೋಹನ್‌ಕುಮಾರ್‌ಗುಪ್ತ, ಪುಸ್ತಕ ದಾನಿ ಎಂ.ಎಸ್.ಗಿರೀಶ್, ನಿವೃತ್ತ ಆರೋಗ್ಯ ಶಿಕ್ಷಣಾಧಿಕಾರಿ ಅಬುಸಾಲೇಹ ಈ ಸಂದರ್ಭದಲ್ಲಿ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಮೂರು ದಿನಗಳ ತರಬೇತಿ ಕಾರ್ಯಾಗಾರ ಆಯೋಜನೆ

» **ಚಿತ್ರದುರ್ಗ**

ರಾಜ್ಯ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಂಗ ಸಂಸ್ಥೆಯಾಗಿರುವ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು "ಅಥಿಛಜಡಿ ಖಜಛಿಣಡುಣಥಿ ಚಿಟಿಜ ಖಟಿಣಜಡಿಟಿಜಣ ಖಚಿಜಿಜಣಥಿ" ವಿಷಯದ ಮೇಲೆ 2025ರ ಫೆಬ್ರವರಿ 05 ರಿಂದ 7 ರವರೆಗೆ ಮೂರು ದಿನಗಳ ತರಬೇತಿ ಕಾರ್ಯಾಗಾರವನ್ನು ಅಕಾಡೆಮಿ ಕಚೇರಿಯಲ್ಲಿ ಆಯೋಜಿಸಲಾಗುತ್ತಿದೆ. ಈ ಕಾರ್ಯಾಗಾರದಲ್ಲಿ "ಅಥಿಛಜಡಿ ಖಜಛಿಣಡುಣಥಿ ಚಿಟಿಜ ಖಟಿಣಜಡಿಟಿಜಣ ಖಚಿಜಿಜಣಥಿ , ನಡೆಯುತ್ತಿರುವ ಆನ್‌ಲೈನ್ ವಂಚನೆಗಳನ್ನು ತಡೆಗಟ್ಟಲು ತೆಗೆದುಕೊಳ್ಳಬೇಕಾದ ಮುಂಜಾಗ್ರತ ಕ್ರಮಗಳು ಮತ್ತು ಅಂತರ್ಜಾಲ ಸುರಕ್ಷತೆ ಉಪಯೋಗದ ಬಗ್ಗೆ ವಿವಿಧ ನುರಿತ ತಜ್ಞರಿಂದ ಉಪನ್ಯಾಸಗಳನ್ನು ಏರ್ಪಡಿಸಲಾಗಿದ್ದು, ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಪ್ರಾಧ್ಯಾಪಕರು, ಪೋಲೀಸ್ ಇಲಾಖೆಯ ಅಧಿಕಾರಿಗಳು ಮತ್ತು ಆಸಕ್ತ ಜನ ಸಾಮಾನ್ಯರು ಭಾಗವಹಿಸಬಹುದಾಗಿದೆ. ಆಸಕ್ತ ಪ್ರತಿನಿಧಿಗಳು ಫೆ.03ರೊಳಗಾಗಿ (Google form-https://forms.gle/9Fds6N5vjzLpjNGX7) ಮೂಲಕ ನೋಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ವಿವರಗಳಿಗೆ ವೈಜ್ಞಾನಿಕಾಧಿಕಾರಿ ಶ್ರೀನಿವಾಸು, (ಮೊ 9620767819) ಹಾಗೂ ಚಂದ್ರಶೇಖರಮೂರ್ತಿ (ಮೊ. 9686449019) ಇವರನ್ನು ಸಂಪರ್ಕಿಸಿ.

### ಗ್ರಾಮೀಣ ಪತ್ರಕರ್ತರಿಗೆ ಜಿಲ್ಲಾ ಬಸ್ ಪಾಸ್: ಆನ್‌ಲೈನ್ ಅರ್ಜಿ ಆಹ್ವಾನ

» **ಚಿತ್ರದುರ್ಗ**

ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮೀಣ ಪತ್ರಕರ್ತರಿಗೆ ವೃತ್ತಿ ಸಂಬಂಧಿತ ಚಟುವಟಿಕೆಗಳಿಗೆ ಜಿಲ್ಲಾ ವ್ಯಾಪ್ತಿಯಲ್ಲಿ ಪ್ರಯಾಣಿಸಲು ಉಚಿತ ಬಸ್ ಪಾಸ್ ಯೋಜನೆಗೆ ಅರ್ಹ ಪತ್ರಕರ್ತರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಮುಖ್ಯಮಂತ್ರಿಗಳು 2024–25 ನೇ ಸಾಲಿನ ಆಯವ್ಯಯದಲ್ಲಿ ಈ ಯೋಜನೆ ಘೋಷಿಸಿದ್ದರು. ರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ವಿದ್ಯುನ್ಮಾನ ಅಥವಾ ಮುದ್ರಣ ಮಾಧ್ಯಮಗಳಲ್ಲಿ ಪೂರ್ಣಾವಧಿಗೆ ನೇಮಕಗೊಂಡು 4 ವರ್ಷಗಳ ಸೇವಾನುಭವ ಹೊಂದಿರುವ ಪತ್ರಕರ್ತರು ಅರ್ಜಿ ಸಲ್ಲಿಸಬಹುದು. ನೇಮಕಾತಿ ಆದೇಶ, ವೇತನ ಪತ್ರ/ ವೇತನ ಪಾವತಿ ಕುರಿತ ಬ್ಯಾಂಕ್ ಸ್ಟೇಟ್‌ಮೆಂಟ್‌ಗಳಲ್ಲಿ ಯಾವುದಾದರೂ ದಾಖಲೆಗಳನ್ನು ಸೇವಾನುಭವಕ್ಕಾಗಿ ಒದಗಿಸಬೇಕು. ಜಿಲ್ಲಾ ವ್ಯಾಪ್ತಿಯಲ್ಲಿ ಸಂಚರಿಸುವ ಕರ್ನಾಟಕ ಸಾರಿಗೆ ಸಂಸ್ಥೆ ಬಸ್ಸುಗಳಲ್ಲಿ ಜಿಲ್ಲಾ ವ್ಯಾಪ್ತಿಗೆ ಉಚಿತವಾಗಿ ಸಂಚರಿಸಬಹುದು.ತಹಸೀಲ್ದಾರರಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರ ಒದಗಿಸಬೇಕು. ರಾಜ್ಯ ಮಟ್ಟದ ಪತ್ರಿಕೆಗಳಲ್ಲಿ ಕಾರ್ಯನಿರ್ವಹಿಸುವ ವರದಿಗಾರರಿಗೆ ಪ್ರತಿ ತಾಲ್ಲೂಕಿಗೆ ಸಂಪಾದಕರು ಸೂಚಿಸುವ ಒಬ್ಬರಿಗೆ, ಜಿಲ್ಲಾ ಮಟ್ಟದ ಪತ್ರಿಕೆಗಳು ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಒಬ್ಬರಿಗೆ, ಆರು ಪುಟಗಳಲ್ಲಿ ಪ್ರಕಟವಾಗುವ ಪ್ರಾದೇಶಿಕ ಪತ್ರಿಕೆಗಳು ಓರ್ವ ವರದಿಗಾರರು ಹಾಗೂ ಓರ್ವ ಫೋಟೋಗ್ರಾಫರ್ ಎಂಟು ಅಥವಾ ಹೆಚ್ಚು ಪುಟಗಳಲ್ಲಿ ಪ್ರಕಟವಾಗುವ ಪ್ರಾದೇಶಿಕ ಪತ್ರಿಕೆಗಳು ಇಬ್ಬರು ವರದಿಗಾರರು ಹಾಗೂ ಓರ್ವ ಫೋಟೋಗ್ರಾಫರ್‌ಗೆ ಬಸ್ ಪಾಸ್ ಪಡೆಯಲು ಅವಕಾಶವಿದೆ. ಉಪಗ್ರಹ ಆಧಾರಿತ ವಿದ್ಯುನ್ಮಾನ ವಾಹಿನಿಗಳ ವರದಿಗಾರರು ತಾಲೂಕು ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದರೆ ಪ್ರತಿ ತಾಲ್ಲೂಕಿಗೆ ಓರ್ವ ಕ್ಯಾಮರಾಮ್ಯಾನ್ ಹಾಗೂ ಓರ್ವ ವರದಿಗಾರರು ಬಸ್ ಪಾಸ್ ಪಡೆಯಬಹುದಾಗಿದೆ. ದಿನಪತ್ರಿಕೆಗಳು ಹಾಗೂ ಉಪಗ್ರಹ ಸುದ್ದಿ ವಾಹಿನಿಗಳ ಸಂಪಾದಕರು ನೀಡುವ ನೇಮಕಾತಿ ಪತ್ರ ಹಾಗೂ ಶಿಫಾರಸ್ಸು ಆಧರಿಸಿ ಅರ್ಹ ಪತ್ರಕರಿಗೆ ಬಸ್ ಪಾಸ್‌ಗಳನ್ನು ನೀಡಲಾಗುವುದು.ಆಸಕ್ತ ಹಾಗೂ ಅರ್ಹ ಪತ್ರಕರ್ತರು ತಮ್ಮ ಸಮೀಪದ ಗ್ರಾಮ ಒನ್,ಕರ್ನಾಟಕ ಒನ್ ಅಥವಾ ಬೆಂಗಳೂರು ಒನ್ ಕೇಂದ್ರಗಳಿಗೆ ತೆರಳಿ ಸೇವಾಸಿಂಧು ಪೋರ್ಟಲ್ ನಲ್ಲಿ ಆನ್‌ಲೈನ್ ಮೂಲಕ ಅಗತ್ಯ ದಾಖಲೆಗಳನ್ನು ಅಪ್‌ಲೋಡ್ ಮಾಡಿ ಅರ್ಜಿ ಸಲ್ಲಿಸಬಹುದು. ಅಪ್‌ಲೋಡ್ ಮಾಡಿದ ದಾಖಲೆಗಳು ಹಾಗೂ ಆನ್‌ಲೈನ್ ಅರ್ಜಿಯ ಮುದ್ರಿತ ಪ್ರತಿಯನ್ನು ತಮ್ಮ ಜಿಲ್ಲೆಯ ಜಿಲ್ಲಾ ವಾರ್ತಾಧಿಕಾರಿಗಳ ಕಚೇರಿಗೆ ಸ್ವಯಂ ದೃಢೀಕರಿಸಿ ಸಲ್ಲಿಸಬೇಕು ಎಂದು ಪ್ರಕಟಣೆ ತಿಳಿಸಿದೆ.

### ವಿಚಾರ ಸಂಕಿರಣ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಹೊರವಲಯದ ಶ್ರೀ ಇಮ್ಮಡಿಗಿರಿ ನಗರದ ಭೋವಿಗುರುಪೀಠದ ಎಸ್. ಜೆ. ಎಸ್. ಸಮೂಹ ಸಂಸ್ಥೆವತಿಯಿಂದ ಜ. 29ರ ಬುಧವಾರ ಬೆಳಿಗ್ಗೆ 10.30ಕ್ಕೆ ಎಸ್ ಜೆ ಎಸ್ ಸಭಾಂಗಣದಲ್ಲಿ ವಿಚಾರ ಸಂಕಿರಣವನ್ನು ಹಮ್ಮಿಕೊಳ್ಳಲಾಗಿದೆ ಎಂದು ಮಠದ ಸಿಇಓ ಗೋವಿಂದಪ್ಪ ತಿಳಿಸಿದ್ದಾರೆ. ವಿಚಾರ ಸಂಕಿರಣದ ಸಾನಿಧ್ಯವನ್ನು ಭೋವಿಗುರುಪೀಠದ ಜಗದ್ಗುರು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿವಹಿಸಲಿದ್ದಾರೆ. "ವೈಜ್ಞಾನಿಕತೆಗಿರುವ ಸವಾಲು ಹಾಗೂ ಪರಿಹಾರೋಪಾಯಗಳು"ಬಗ್ಗೆ ರಾಷ್ಟ್ರೀಯ ವಿಚಾರವಾದಿಗಳ ಸಂಘ, ಕರ್ನಾಟಕದ ಅಧ್ಯಕ್ಷರಾದ ಪ್ರೊ. ನರೇಂದ್ರ ನಾಯಕ್ ಮಾತನಾಡುವರು.

# ನಗರದಲ್ಲಿನ ರಸ್ತೆ ಅಗಲೀಕರಣ ಕೈ ಬಿಟ್ಟು, ನಗರ ವಿಸ್ತರಿಸುವ ಕುರಿತು ಯೋಜನೆ ರೂಪಿಸಿ

» **ಚಿತ್ರದುರ್ಗ**




ನಗರದಲ್ಲಿನ ರಸ್ತೆಗಳ ಅಗಲೀಕರಣ ಕಾರ್ಯವನ್ನು ಕೈ ಬಿಟ್ಟು, ನಗರವನ್ನು ವಿಸ್ತರಿಸುವ ಕುರಿತು ಯೋಜನೆ ರೂಪಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ, ಶಾಸಕ ಹಾಗೂ ಜಿಲ್ಲಾಡಳಿತವನ್ನು ಆಮ್ ಆದ್ಮಿ ಪಕ್ಷದ ಜಿಲ್ಲಾಧ್ಯಕ್ಷ ಬಿ.ಇ.ಜಗದೀಶ್ ಆಗ್ರಹಿಸಿದ್ದಾರೆ.

ನಗರದಪತ್ರಿಕಾಭವನದಲ್ಲಿಮಂಗಳವಾರ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತ ನಾಡಿದ ಅವರು, ನಗರದ ರಸ್ತೆಗಳ ಅಗಲೀಕರಣಕ್ಕೆ ಕನಿಷ್ಟ 300 ರಿಂದ 400 ಕೋಟಿ ರೂ. ವೆಚ್ಚ ಆಗಲಿದೆ. ಆದರೆ ಇದರಿಂದ ಜನರಿಗೆ ಸಂಕಷ್ಟ ತಪ್ಪುವುದಿಲ್ಲ. ಅದರ ಬದಲಾಗಿ ನಗರವನ್ನು ವಿಸ್ತರಣೆ ಮಾಡಬೇಕು ಇದರಿಂದ ಸಾಕಷ್ಟು ಜನರಿಗೆ ಉದ್ಯೋಗ ಸೃಷ್ಟಿಯಾಗುತ್ತದೆ. ನಗರದ ಹೊರ ಭಾಗದಲ್ಲಿ ಹೊಸ ಡಿಸಿ ಕಚೇರಿ ನಿರ್ಮಾಣ ಆಗುತ್ತಿರುವ ಕಡೆ ಸರ್ಕಾರಿ ಜಾಗವಿದ್ದು, ಆ ಜಾಗದಲ್ಲಿ ಬಸ್ ನಿಲ್ದಾಣ ನಿರ್ಮಾಣ ಮಾಡಿದರೆ ನಗರದಲ್ಲಿನ ಸಂಚಾರ ದಟ್ಟಣೆ ಕಡಿಮೆ ಆಗಲಿದೆ ಎಂದು ಹೇಳಿದರು.

ನಗರದ ರಸ್ತೆಗಳನ್ನು ಎಷ್ಟೇ ವಿಶಾಲ ಮಾಡಿದರೂ ನಗರದಲ್ಲಿ ಒತ್ತಡ ಕಡಿಮೆ ಆಗುವುದಿಲ್ಲ. ಶಿವಮೊಗ್ಗ ನಗರದ ಮಾದರಿಯಲ್ಲಿ ಖಾಸಗಿ ಬಸ್ ನಿಲ್ದಾಣವನ್ನು ಹೊರಗೆ ಹಾಕಿ, ಈಗ ಇರುವ ಜಾಗದಲ್ಲಿ ಮಾರುಕಟ್ಟೆ ಮಾಡಿದರೆ ಅನುಕೂಲ ಆಗುತ್ತದೆ. ಸರ್ಕಾರಿ ಕಚೇರಿಗಳು ಹೊರಗೆ ಹೋಗುವುದರಿಂದ ಉದ್ಯೋಗ ಸೃಷ್ಟಿ ಆಗುತ್ತದೆ. ಜಿಲ್ಲಾ ಮಟ್ಟದ ಅಧಿಕಾರಿಗಳ, ಜನ ಪ್ರತಿನಿಧಿಗಳು ಈ ನಿಟ್ಟಿನಲ್ಲಿ ಚಿಂತನೆ ಮಾಡಬೇಕು ಎಂದು ಒತ್ತಾಯಿಸಿ ನಗರದಲ್ಲಿ ಅವೈಜ್ಞಾನಿಕ ಡಿವೈಡರ್ ನಿರ್ಮಾಣ ಮಾಡಿ ಕಾಂಪ್ಲೆಕ್ಸ್ ಮಾಲೀಕರಿಗೆ ತೊಂದರೆ ಕೊಡುವಂತಹ ನಿರ್ಧಾರ ತೆಗೆದುಕೊಳ್ಳಲಾಗಿದೆ.ನಗರದಲ್ಲಿ ರೋಡ್ ಅಗಲೀಕರಣ ಮಾಡುತ್ತಾ ಹೋದರೆ ನಗರ ಅಭಿವೃದ್ಧಿ ಹೇಗೆ ಆಗುತ್ತದೆ ಎಂದು ಪ್ರಶ್ನಿಸಿದರು.

ಮೈಕ್ರೋ ಫೈನಾನ್ಸ್ ಅಂತಹ ಸಂಸ್ಥೆಗಳು ಕೂಲಿ ಕಾರ್ಮಿಕರಿಗೆ ಅಮಿಷ ತೋರಿಸಿ ಹಣ ನೀಡಿ ಅವರನ್ನು ದಿಕ್ಕು ತಪ್ಪಿಸುವ ಕಾರ್ಯ ಮಾಡುತ್ತಿದ್ದಾರೆ. ಇದರ ಬಗ್ಗೆ ಆರ್ ಬಿ ಐ ಕೂಡಲೇ ಕ್ರಮ ಕೈಗೊಳ್ಳಬೇಕು. ಇತ್ತೀಚಿಗೆ ನಡೆದ ಮೈಕ್ರೋ ಫೈನಾನ್ಸ್ ಹಾವಳಿಯಿಂದ ಸುಮಾರು 6 ಜನ ಆತ್ಮಹತ್ಯೆಗಿಡಾಗಿದ್ದಾರೆ ಆದ್ದರಿಂದ ಮೈಕ್ರೋ ಫೈನಾನ್ಸ್ ಅಂತಹ ಸಂಸ್ಥೆಗಳ ಬಗ್ಗೆ ಸರ್ಕಾರ ಕೂಡಲೇ ಕ್ರಮ ಕೈಗೊಂಡು ಆತ್ಮಹತ್ಯೆ ಮಾಡಿಕೊಂಡ ವ್ಯಕ್ತಿಗಳಿಗೆ ಪರಿಹಾರ ಘೋಷಣೆ ಮಾಡಬೇಕು ಎಂದು ಆಗ್ರಹಿಸಿದರು.

ಜನ ಸಾಮಾನ್ಯರು ಕೂಡ ಮೈಕ್ರೋ ಫೈನಾನ್ಸ್ ಮೂಲಕ ಸಾಲ ಪಡೆದು ತೊಂದರೆಗೆ ಸಿಲುಕಬಾರದು ಬದಲಾಗಿ, ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಸಾಲ ಪಡೆದರೆ ತೊಂದರೆ ಆಗುವುದಿಲ್ಲ. ಅವರು ಮಾನವೀಯತೆಯಿಂದ ವರ್ತಿಸುತ್ತಾರೆ ಎಂದು ಸಲಹೆ ನೀಡಿ ಮೈಕ್ರೋ ಫೈನಾನ್ಸ್‌ಗಳು ಆರ್.ಬಿ.ಐ ಅಡಿಯಲ್ಲಿ ಬರುವುದರಿಂದ ಮೈಕ್ರೋ ಫೈನಾನ್ಸ್‌ಗಳ ಬಗ್ಗೆ ಆರ್.ಬಿ.ಐ ಸೂಕ್ತ ಕ್ರಮ ಕೈಗೊಳ್ಳಬೇಕು.ರಾಷ್ಟ್ರೀಕೃತ ಬ್ಯಾಂಕುಗಳು ಸಾಲ ನೀಡಿಕೆಯ ನಿಯಮಗಳನ್ನು ಸಡಿಲಗೊಳಿಸಿ ಮಾಧ್ಯಮ ವರ್ಗ, ಕೆಳ ವರ್ಗದ ಜನರ ನೆರವಿಗೆ ಬರಬೇಕು ಎಂದು ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಕಾರ್ಯದರ್ಶಿ ರಾಮಣ್ಣ, ತಾಲೂಕು ಅಧ್ಯಕ್ಷ ಚಂದ್ರಯಾನ ಹಾಜರಿದ್ದರು.

## ಸಂಚಾರ ನಿಯಮಗಳನ್ನು ಪಾಲಿಸಿದರೆ ಅಪಘಾತ ಆಗುವುದಿಲ್ಲ: ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್

» **ಚಿತ್ರದುರ್ಗ**




ಸಂಚಾರ ನಿಯಮಗಳನ್ನು ತಪ್ಪದೇ ವಾಹನ ಸವಾರರೆಲ್ಲರೂ ಸಾಮಾನ್ಯವಾಗಿ ಎಲ್ಲರೂ ಪಾಲಿಸಿದರೆ ಅನೇಕ ಅಪಘಾತ ಹಾಗೂ ಆಘಾತಗಳು ಆಗುವುದಿಲ್ಲ ಎಂದು ಚಿತ್ರದುರ್ಗ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಾದ ಭರತ್.ಎಂ. ಕಾಳಿಸಿಂಗ್ ಸಲಹೆ ಮಾಡಿದರು.

ಅವರು ನೆಹರು ಯುವ ಕೇಂದ್ರ,ಭಾರತೀಯ ರೆಡ್ ಕ್ರಾಸ್ ಸಂಸ್ಥೆ,ಪ್ರಾದೇಶಿಕ ಸಾರಿಗೆ ಕಛೇರಿ ಚಿತ್ರದುರ್ಗ,ಎಸ್. ಜೆ.ಎಂ ಪಾಲಿಟೆಕ್ನಿಕ್ ಮತ್ತುಶ್ರೀ ನೀಲಕಂಠ ಮೆಮೋರಿಯಲ್ ಪ್ಯಾರಾಮೆಡಿಕಲ್ ಕಾಲೇಜು ಚಿತ್ರದುರ್ಗ,ಇವರುಗಳ ಸಂಯುಕ್ತ ಆಶ್ರಯದಲ್ಲಿರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ ಅಂಗವಾಗಿ ಇಂದು ಚಿತ್ರದುರ್ಗ ಎಸ್. ಜೆ.ಎಂ ಪಾಲಿಟೆಕ್ನಿಕ್ ಕಾಲೇಜಿನನಲ್ಲಿ ಏರ್ಪಡಿಸಿದ್ದ ವಿದ್ಯಾರ್ಥಿಗಳಿಗೆ ರಸ್ತೆ ಸುರಕ್ಷತೆಯ ಪ್ರತಿಜ್ಞಾ ವಿಧಿಯನ್ನು ಭೋದಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿ ವಿದ್ಯಾರ್ಥಿಗಳಿಗೆ ಸಂಚಾರಿ ನಿಯಮ ಮತ್ತು ಕಡ್ಡಾಯ ಮಾಹಿತಿ ಚಿನ್ಹೆಗಳು, ಹಾಗೂ ರಸ್ತೆ ಅಪಘಾತ ನಡೆದ ಸಂದರ್ಭದಲ್ಲಿ ವಹಿಸಬೇಕಾದ ಎಚ್ಚರಿಕೆಗಳ ಬಗ್ಗೆ ಜಾಗೃತಿ ಮೂಡಿಸಿ,ದ್ವಿಚಕ್ರ ವಾಹನ ಸವಾರರು ಮೊಬೈಲ್ ನಲ್ಲಿ ಮಾತನಾಡುತ್ತಾ ವಾಹನ ಚಾಲನೆ ಮಾಡಬೇಡಿ, ಹೆಲ್ಮೆಟ್ ಧರಿಸಿ ವಾಹನ ಚಾಲನೆ ಮಾಡಿ, ರಸ್ತೆ ಸುರಕ್ಷತೆ ಕುರಿತು ಮುತುವರ್ಜಿ ವಹಿಸಿ ಪ್ರಾಣ ರಕ್ಷಿಸಿಕೊಳ್ಳಬೇಕು, ಎಚ್ಚರಿಕೆಯಿಂದ ವಾಹನ ಚಾಲನೆ ಮಾಡಬೇಕು,ರಸ್ತೆಯಲ್ಲಿ ಸಂಚರಿಸುವಾಗ ಸುರಕ್ಷಿತ ಕ್ರಮಗಳನ್ನು ಅನುಸರಿಸಬೇಕೆಂದು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದರು.

ಎಸ್.ಜೆ.ಎಂ ಪಾಲಿಟೆಕ್ನಿಕ್ ಪ್ರಾಂಶುಪಾಲರಾದ ಎಸ್.ವಿ.ರವಿಶಂಕರ್ ಮಾತನಾಡಿ 18 ವರ್ಷಕ್ಕಿಂತ ಕಡಿಮೆ ಇರುವ ವಿದ್ಯಾರ್ಥಿಗಳು ವಾಹನ ಚಾಲನೆ ಮಾಡಬಾರದು ಹಾಗೂ ಶಿಸ್ತಿನ ಜೊತೆ ಸಂಸ್ಕಾರವನ್ನು ಮೈಗೂಡಿಸಿಕೊಂಡು ಉತ್ತಮ ನಾಗರೀಕರಾಗಿ ರಸ್ತೆ ಸುರಕ್ಷತಾ ಕ್ರಮಗಳನ್ನು ಅನುಸರಿಸಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಕಾರ್ಯಕ್ರಮದ ನಂತರ ಕಾಲೇಜಿನ ವಿದ್ಯಾರ್ಥಿಗಳಿಗೆ ರಕ್ತದ ಗುಂಪಿನ ಪರೀಕ್ಷೆ ಮಾಡಲಾಯಿತು.ಈ ಸಂದರ್ಭದಲ್ಲಿ ನೆಹರು ಯುವ ಕೇಂದ್ರದ ಯುವಜನ ಅಧಿಕಾರಿಗಳಾದ ಸುಹಾಸ್, ರೆಡ್ ಕ್ರಾಸ್ ಸಂಸ್ಥೆಯ ಕಾರ್ಯದರ್ಶಿಗಳಾದ ಮಜಹರ್ ಉಲ್ಲಾ, ಅಮೃತ್ ನರ್ಸಿಂಗ್ ಕಾಲೇಜ್ ಪ್ರಾಂಶುಪಾಲರಾದ ವಜಾಹತ್ ಉಲ್ಲಾ, ಪ್ರಾದೇಶಿಕ ಕಚೇರಿ ವಾಹನ ನಿರೀಕ್ಷಕರಾದ ರಾಜೇಶ್, ಎಸ್. ಜೆ. ಎಂ .ಪಾಲಿಟೆಕ್ನಿಕ್ ನ ಉಪನ್ಯಾಸಕರಾದ ರಾಜೇಶ್ ಕುಮಾರ್, ಗಂಗಾಧರ್, ಲತಾ,ಪ್ರತಿಮಾ, ಸವಿತಾ ಸಬಿತಾ, ವಾಣಿ, ರಘು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ಬೆಂಬಲ ಬೆಲೆಯಡಿ ಕಡಲೆಕಾಳು ಖರೀದಿ, ಜ.27 ರಿಂದ ನೊಂದಣಿ ಪ್ರಾರಂಭ: ಗಂಗಾಧರಸ್ವಾಮಿ ಜಿ.ಎಂ

**ದಾವಣಗೆರೆ** : ಹಿಂಗಾರು ಹಂಗಾಮಿನಲ್ಲಿ ಬೆಳೆದ ಕಡಲೆಕಾಳು ಉತ್ಪನ್ನವನ್ನು ರೈತರಿಂದ ನೇರವಾಗಿ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಲು ಸರ್ಕಾರ ಆದೇಶಿಸಿದ್ದು ಖರೀದಿಗೆ ನೊಂದಣಿಯನ್ನು ಪ್ರಾರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದ್ದಾರೆ. ಅವರು ಇತ್ತೀಚೆಗೆ ನಡೆದ ಬೆಂಬಲ ಬೆಲೆಯಡಿ ಕಡಲೆಕಾಳು ಖರೀದಿಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಏರ್ಪಡಿಸಿದ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಉತ್ತಮ ಗುಣಮಟ್ಟದ ಕಡಲೆಕಾಳಿಗೆ ಸರ್ಕಾರ ಪ್ರತಿ ಕ್ವಿಂಟಾಲ್‌ಗೆ 5650 ರೂ. ನಿಗದಿಪಡಿಸಿದೆ. ಪ್ರಸ್ತುತ ಮಾರುಕಟ್ಟೆಯಲ್ಲಿ ಕಡಲೆಕಾಳಿನ ಬೆಲೆ ಕುಸಿದಿದ್ದು, ರೈತರು ನಷ್ಟಕ್ಕೆ ಒಳಗಾಗುತ್ತಿದ್ದಾರೆ. ಹೀಗಾಗಿ ರೈತರ ಹಿತಕಾಯಲು ಸರ್ಕಾರದ ವತಿಯಿಂದ ಜಿಲ್ಲೆಯಲ್ಲಿ ಕೂಡಲೆ ಬೆಂಬಲ ಬೆಲೆಯಲ್ಲಿ ಕಡಲೆಕಾಳು ಖರೀದಿಗೆ ಜಗಳೂರು ಮತ್ತು ಚನ್ನಗಿರಿ ಎಪಿಎಂಸಿ ಆವರಣದಲ್ಲಿ ರೈತರ ನೊಂದಣಿ ಕಾರ್ಯ ಪ್ರಾರಂಭಿಸಬೇಕು. ನೊಂದಣಿಗೂ ಮುನ್ನ ರೈತರು ಫ್ರೂಟ್ಸ್ ತಂತ್ರಾಂಶದಲ್ಲಿ ನೊಂದಣಿ ಮಾಡಿರಬೇಕು. ಖರೀದಿ ಕೇಂದ್ರಕ್ಕೆ ಅವಶ್ಯಕವಿರುವ ಸಿಬ್ಬಂದಿಯನ್ನು ನೇಮಕಾತಿ ಮಾಡಿಕೊಳ್ಳಬೇಕು ಹಾಗೂ ಖರೀದಿಗೆ ಸಂಬಂಧಿಸಿದಂತೆ ಎಲ್ಲಾ ಅಗತ್ಯ ಪೂರ್ವ ಸಿದ್ಧತೆ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು. ಎಫ್‌ಎಕ್ಯೂ ಗುಣಮಟ್ಟದ ಕಡಲೆಕಾಳಿಗೆ ಪ್ರತಿ ಕ್ವಿಂಟಾಲ್ ರೂ. 5650 ರೂ. ಬೆಂಬಲ ಬೆಲೆ ನಿಗದಿಪಡಿಸಿದ್ದು, ನಾಫೆಡ್ ಸಂಸ್ಥೆಯನ್ನು ಕೇಂದ್ರದ ಖರೀದಿ ಏಜೆನ್ಸಿಯಾಗಿ ಹಾಗೂ ಕರ್ನಾಟಕ ಸಹಕಾರ ಮಾರಾಟ ಮಹಾ ಮಂಡಳಿ ರಾಜ್ಯದ ವತಿಯಿಂದ ಖರೀದಿ ಏಜೆನ್ಸಿಯಾಗಿದೆ. ಜ.27 ರಿಂದ 80 ದಿನಗಳ ಕಾಲ ರೈತರಿಂದ ನೊಂದಣಿ ಕಾರ್ಯ ನಡೆಯಲಿದ್ದು, ಖರೀದಿಯೂ ಕೂಡ 90 ದಿನಗಳ ಕಾಲ ನಡೆಯಲಿದೆ. ಪ್ರತಿ ಎಕರೆಗೆ 4 ಕ್ವಿಂಟಾಲ್, ಪ್ರತಿ ರೈತರಿಂದ ಗರಿಷ್ಠ 20 ಕ್ವಿಂ. ಕಡಲೆಕಾಳು ಖರೀದಿಗೆ ಮಿತಿ ನಿಗದಿಪಡಿಸಲಾಗಿದೆ. ರೈತರು ಇದರ ಸದುಪಯೋಗ ಮಾಡಿಕೊಳ್ಳಲು ಅವರು ತಿಳಿಸಿದ್ದಾರೆ.

## ಸಿದ್ದೇಶ್ವರನದುರ್ಗ ಹೈಸ್ಕೂಲ್ನಲ್ಲಿ ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ

» **ಪರಶುರಾಂಪುರ**

ಸಮೀಪದ ಸಿದ್ದೇಶ್ವರನದುರ್ಗದ ಸರ್ಕಾರಿ ಪ್ರೌಢಶಾಲಾ ಆವರಣದಲ್ಲಿ ಶುಕ್ರವಾರ ಅಖಂಡ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಜಿಲ್ಲಾ ಕಿಸಾನ್ ಘಟಕದಿಂದ ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ ಕಾರ್ಯಕ್ರಮ ನಡೆಸಲಾಯಿತು.ಮುಖ್ಯ ಶಿಕ್ಷಕಿ ಮಂಜುಳ ಮಾತನಾಡಿ, ಪ್ರಸ್ತುತ ದಿನಮಾನಗಳಲ್ಲಿ ಮಹಿಳೆಯರಿಗೆ ಬಹಳಷ್ಟು ಸೌಲಭ್ಯಗಳಿದ್ದು, ಅವುಗಳ ಸದುಪಯೋಗ ಪಡೆದುಕೊಂಡು ಮುಂದೆ ಬರಬೇಕು ಜತೆಗೆ ನಮ್ಮ ದೇಶ ಉಜ್ವಲವಾಗಿ ಬೆಳೆಯಬೇಕಾದರೆ ಮಹಿಳೆ ಅಥವಾ ತಾಯಿಯ ಪಾತ್ರ ಬಹಳ ಮುಖ್ಯ ಇದೆ. ಅನೇಕ ಮಹಿಳೆಯರು ದೇಶಕ್ಕಾಗಿ ತ್ಯಾಗ ಬಲಿದಾನ ಮಾಡಿದ್ದಾರೆ. ವೀರರಾಣಿ ಕಿತ್ತೂರು ಚನ್ನಮ್ಮ. ಓನಕೆ ಓಬವ್ವ ಸೇರಿದಂತೆ ಹಲವಾರು ಮಹನೀಯರೇ ಇದಕ್ಕೆ ಸಾಕ್ಷಿ ಎಂದು ತಿಳಿಸಿದರು.ಈ ವೇಳೆಯಲ್ಲಿ ಕಿಸಾನ್ ಘಟಕದ ಜಿಲ್ಲಾಧ್ಯಕ್ಷ ಎ.ನಾಗರಾಜ್ ಮಾತನಾಡಿ, ಈ ದೇಶದ ಪ್ರಗತಿಗೆ ಹೆಣ್ಣು ಮಕ್ಕಳ ಕೊಡುಗೆ ಅಪಾರ ಆಗೆ ಎಲ್ಲಾ ಕ್ಷೇತ್ರಗಳಲ್ಲೂ ಕೂಡ ಹೆಣ್ಣು ಮಕ್ಕಳು ಮೇಲುಗೈ ಸಾಧಿಸಿ ಗಾಂಧಿ ಕಂಡಂತ ಕನಸನ್ನು ನನಸು ಮಾಡುವ ನಿಟ್ಟಿನಲ್ಲಿ ಹೆಣ್ಣು ಮಕ್ಕಳು ಶೈಕ್ಷಣಿಕ, ರಾಜಕೀಯ, ಸಾಮಾಜಿಕ, ಆರ್ಥಿಕವಾಗಿಯೂ ಕೂಡ ಬಲಿಷ್ಠರಾಗಿ ಭಾರತ ದೇಶವನ್ನು ಕಟ್ಟಲು ಮುಂದೆ ಬರಬೇಕಾಗಿದೆ, ಆಗೆ ಋಷಿಗಳ ಕಾಲದಿಂದಲೂ ಕೂಡ ಹೆಣ್ಣನ್ನು ಪೂಜ್ಯನೀಯ ಭಾವನೆಯಲ್ಲಿ ನಿಲ್ಲಿಸಿ ಪಾವಿತ್ರತೆಯ ಹೆಸರಾದ ಎಲ್ಲಾ ಹೆಸರುಗಳನ್ನು ಹೆಣ್ಣು ಮಕ್ಕಳ ಹೆಸರುಗಳಲ್ಲಿ ಕರೆದು ಗೌರವತವಾಗಿ ನಡೆಸಿಕೊಂಡು ಬಂದಿರುವುದನ್ನ ಕಾಣಬಹುದಾಗಿದೆ ಎಂದರು.



## ಪ್ರಮುಖ ಸುದ್ದಿ

# ಕಲಿಕಾ ಮಟ್ಟ ಪರಿಗಣಿಸಿ ಪ್ರಶ್ನೆ ಪತ್ರಿಕೆ ಸಿದ್ದಪಡಿಸಬೇಕು

» **ಚಿತ್ರದುರ್ಗ**




ಪ್ರಶ್ನೆ ಪತ್ರಿಕೆ ಸಿದ್ಧಪಡಿಸುವಾಗ ಕೇವಲ ನಗರಗಳಲ್ಲಿ ಕಲಿಯುವ ಮಕ್ಕಳ ಕಲಿಕಾ ಮಟ್ಟವನ್ನಷ್ಟೇ ಪರಿಗಣಿಸದೆ ಗ್ರಾಮೀಣ ಪ್ರದೇಶದಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳ ಕಲಿಕಾ ಮಟ್ಟವನ್ನು ಸಹ ಪರಿಗಣಿಸಿ ಪ್ರಶ್ನೆ ಪತ್ರಿಕೆ ಸಿದ್ದಪಡಿಸಬೇಕು ಎಂದು ಚಿತ್ರದುರ್ಗ ಜಿಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಆರ್.ಪುಟ್ಟಸ್ವಾಮಿ ಕರೆ ನೀಡಿದರು.

ನಗರದ ನಮ್ಮ ಎಕ್ಸ್ ಪರ್ಟ್ ಪದವಿ ಪೂರ್ವ ಕಾಲೇಜಿನಲ್ಲಿ ಸೋಮವಾರ ಆಯೋಜಿಸಿದ್ದ "ಇತಿಹಾಸ ಹಾಗೂ ಗಣಿತಶಾಸ್ತ್ರ ವಿಷಯಗಳ ಸರ್ಕಾರಿ ಉಪನ್ಯಾಸಕರುಗಳ ಪುನಶ್ಚೇತನ ಹಾಗೂ ಪ್ರಶ್ನೆ ಪತ್ರಿಕೆ ತರಬೇತಿ ಕಾರ್ಯಾಗಾರದ ಉದ್ಘಾಟನಾ ಸಮಾರಂಭ" ದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು.

ಉತ್ತಮ ಉಪನ್ಯಾಸಕ ವಿದ್ಯಾರ್ಥಿಗಳ ಹಿತ ಬಯಸುವ ಪೋಷಕನ ಪಾತ್ರ ನಿರ್ವಹಿಸಿದಾಗ ಮಾತ್ರ ನಿರೀಕ್ಷಿತ ಫಲಿತಾಂಶ ಪಡೆಯಲು ಸಾಧ್ಯವಾಗುತ್ತದೆ ಎಂದರು. ಆರಂಭದಲ್ಲಿ ಪ್ರಾಂಶುಪಾಲರ ಸಂಘದ ಅಧ್ಯಕ್ಷರಾದ ಎಸ್.ದೇವೇಂದ್ರಪ್ಪ ಪ್ರಾಸ್ತಾವಿಕವಾಗಿ ಮಾತನಾಡುತ್ತಾ ಇಲಾಖೆಯು ಪ್ರತಿ ಉಪನ್ಯಾಸಕರ ಮತ್ತು ಪ್ರಾಂಶುಪಾಲರ ಕರ್ತವ್ಯ ನಿಷ್ಠೆ, ನಂಬಿಕೆ,ಬದ್ಧತೆ ಮತ್ತು ಪ್ರಾಮಾಣಿಕ ಸೇವೆಯನ್ನು ಗುರುತಿಸಿ ಇಲಾಖಾ ಗೌಪ್ಯ ಕೆಲಸಗಳನ್ನು ನಿರ್ವಹಿಸುವಂತೆ ಸೂಚಿಸುತ್ತದೆ.ಹೀಗಾಗಿ ಪ್ರತಿ ಉಪನ್ಯಾಸಕರುಗಳು ತಮ್ಮ ,ಆತ್ಮಸಾಕ್ಷಿಗೆ ಅನುಗುಣವಾಗಿ ತಮ್ಮಲ್ಲಿರುವ ಜ್ಞಾನವನ್ನು ವಿದ್ಯಾರ್ಥಿಗಳಿಗೆ ಧಾರೆಯೆರೆಯಲು ಮುಂದಾಗಬೇಕು ಎಂದರು.

ಉಪನ್ಯಾಸಕರ ಸಂಘದ ಅಧ್ಯಕ್ಷರಾದ ಬಿ.ಆರ್.ಮಲ್ಲೇಶ್ ರವರು ಮಾತನಾಡಿ ಈ ಹಿಂದೆ ಉಪನ್ಯಾಸಕರು ತರಗತಿಗಳಲ್ಲಿ ಬೋಧಿಸುವುದು ಮಾತ್ರ ನಮ್ಮ ಪ್ರಮುಖ ಕರ್ತವ್ಯವೆಂದು ಭಾವಿಸಿದ್ದರು. ಆದರೆ ಇತ್ತೀಚಿನ ವರ್ಷಗಳಲ್ಲಿ ಬೋಧನೆ ಸಹಿತ ಇಲಾಖೆಯ ಬದಲಾದ ಮಾರ್ಗಸೂಚಿಗಳನ್ವಯ ಇನ್ನಿತರ ಕೆಲಸಕಾರ್ಯಗಳನ್ನು ನಿರ್ವಹಿಸುವುದರೊಂದಿಗೆ ಜಿಲ್ಲೆಯ ಫಲಿತಾಂಶ ಸುಧಾರಣೆಗೆ ಹೆಚ್ಚಿನ ಒತ್ತುಕೊಡಬೇಕಾಗಿದೆ ಎಂದರು.

ನಮ್ಮ ಎಕ್ಸ್‌ಪರ್ಟ್ ಪ.ಪೂ ಕಾಲೇಜಿನ ಪ್ರಾಂಶುಪಾಲರಾದ ಪಿ.ಅರುಣ್ ಕುಮಾರ್ ಮಾತಾನಾಡಿ ಕಲಿಕೆಯಲ್ಲಿ ಹಿಂದುಳಿದ ಮಕ್ಕಳು ಹೆಚ್ಚಾಗಿ ಸರ್ಕಾರಿ ಕಾಲೇಜುಗಳಲ್ಲಿ ಪ್ರವೇಶಾತಿ ಪಡೆದು ಫಲಿತಾಂಶ ಹಿನ್ನಡೆಗೆ ಕಾರಣರಾಗುತ್ತಾರೆ.ಅಂತಹ ಮಕ್ಕಳನ್ನು ಗುರುತಿಸಿ ಅವರಲ್ಲಿ ಕಲಿಕಾಸಕ್ತಿಯನ್ನು ಮೂಡಿಸುವಕಲೆಗಾರಿಕೆಯನ್ನುಪುನಶ್ಚೇತನ ತರಬೇತಿಗಳು ಒದಗಿಸಿಕೊಡುತ್ತವೆ ಎಂದರು. ಕಾರ್ಯಾಗಾರದಲ್ಲಿ ಇತಿಹಾಸ ವಿಷಯದ ಸಂಪನ್ಮೂಲ ವ್ಯಕ್ತಿಗಳಾದ ಡಾ.ಬಿ.ಕೃಷ್ಣಪ್ಪ, ಹೆಚ್.ಎಸ್. ಮೈಲಾರಲಿಂಗಮ್, ಎನ್. ತಿಮ್ಮಪ್ಪ, ಗಣಿತಶಾಸ್ತ್ರ ವಿಷಯದ ಸಂಯೋಜಕರಾದ ಕೃಷ್ಣಮೂರ್ತಿ, ಸಂಪನ್ಮೂಲ ವ್ಯಕ್ತಿಗಳಾದ ಡಾ.ತಿಮ್ಮಾರೆಡ್ಡಿ,ಡಿ.ವೀರಣ್ಣ, ಮಂಜುನಾಥ್ ಮತ್ತು ಉಮೇಶ್ ಉಪಸ್ಥಿತರಿದ್ದರು. ವಿದ್ಯಾರ್ಥಿನಿ ಯರಾದ ಕುಮಾರಿ ಭೂಮಿಕ & ದಿಶಾ ಪ್ರಾರ್ಥಿಸಿದರು, ಉಪನ್ಯಾಸಕಿ ಶ್ರೀಮತಿ ಪದ್ಮ ಆರ್.ಜೈನ್ ಕಾರ್ಯಕ್ರಮ ನಿರ್ವಹಣೆ ಮಾಡಿದರು. ದಾವಣಗೆರೆ ಹಾಗೂ ಚಿತ್ರದುರ್ಗ ಜಿಲ್ಲೆಯ ಸರ್ಕಾರಿ ಕಾಲೇಜುಗಳ ಗಣಿತ ಮತ್ತು ಇತಿಹಾಸ ವಿಷಯದ ಸರ್ಕಾರಿ ಕಾಲೇಜುಗಳ ಉಪನ್ಯಾಸಕರುಗಳು ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### "ಡಾ.ಬಿ.ಆರ್.ಅಂಬೇಡ್ಕರ್ ಓದು" ಕಾರ್ಯಕ್ರಮ

» ಚಿತ್ರದುರ್ಗ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಸರ್ಕಾರಿ ಕಲಾ ಕಾಲೇಜು (ಸ್ವಾಯತ್ತ) ಸ್ನಾತಕೋತ್ತರ ಅಧ್ಯಯನ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ಇದೇ ಜ.31ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದ ಸರ್ಕಾರಿ ಕಲಾ ಕಾಲೇಜು ಪಿ.ಜಿ.ಸಭಾಂಗಣದಲ್ಲಿ "ಡಾ.ಬಿ.ಆರ್.ಅಂಬೇಡ್ಕರ್ ಓದು"– ರಸಪ್ರಶ್ನೆ, ಪ್ರಬಂಧ,ಆಶುಭಾಷಣ,ಕವನವಾಚನಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸರ್ಕಾರಿ ಕಲಾ ಕಾಲೇಜು ಪ್ರಾಂಶುಪಾಲ ಪ್ರೊ.ಬಿ.ಟಿ.ತಿಪ್ಪೇರುದ್ರಸ್ವಾಮಿ ಉದ್ಘಾಟಿಸುವರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ ಪ್ರಾಸ್ತಾವಿಕ ನುಡಿಗಳನ್ನಾಡುವರು. ಪ್ರಾಧ್ಯಾಪಕ ಹಾಗೂ ಕುವೆಂಪು ಭಾಷಾ ಭಾರತಿ ಸದಸ್ಯ ಪ್ರೊ. ಜೆ.ಕರಿಯಪ್ಪ ಮಾಳಿಗೆ ಅಧ್ಯಕ್ಷತೆ ವಹಿಸುವರು. ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ಉಪನ್ಯಾಸಕ ಡಾ.ಜೆ.ಮೋಹನ್ ಉಪನ್ಯಾಸ ನೀಡುವರು. ವಕೀಲ ಎಂ.ರಮೇಶ್ ಪ್ರತಿಕ್ರಿಯೆ ನೀಡುವರು. ಮುಖ್ಯ ಅತಿಥಿಗಳಾಗಿ ಸರ್ಕಾರಿ ಕಲಾ ಕಾಲೇಜು ಐಕ್ಯೂಎಸಿ ಸಂಚಾಲಕರಾದ ಪ್ರೊ. ಆರ್.ತಾರಿಣಿ ಶುಭದಾಯಿನಿ, ಪರೀಕ್ಷಾ ನಿಯಂತ್ರಕ ಡಾ.ಬಿ.ಸುರೇಶ, ಕಾಲೇಜು ಅಧ್ಯಾಪಕರ ಸಂಘ ಕಾರ್ಯದರ್ಶಿ ಡಾ.ಆರ್.ಗಂಗಾಧರ, ಇತಿಹಾಸ ವಿಭಾಗದ ಮುಖ್ಯಸ್ಥ ಡಾ.ಆರ್.ಶಿವಪ್ಪ, ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಗಿರೀಶ್ ನಾಯಕ, ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಶ್ಯಾಮ್ ರಾಜ್, ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ.ಲೀಲಾವತಿ ಭಾಗವಹಿಸುವರು. ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಪುಸ್ತಕ ಬಹುಮಾನ ಹಾಗೂ ಪ್ರಮಾಣ ಪತ್ರ ವಿತರಿಸಲಾಗುವುದು.

### ಫೆ.01ರಂದು ಮಡಿವಾಳ ಮಾಚಿದೇವ ಜಯಂತಿ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಫೆ.01ರಂದು ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ "ಮಡಿವಾಳ ಮಾಚಿದೇವ ಜಯಂತಿ" ಆಚರಣೆ ಸಮಾರಂಭ ಹಮ್ಮಿಕೊಳ್ಳಲಾಗಿದೆ. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟನೆ ನೆರವೇರಿಸುವರು. ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ ಕಾರಜೋಳ, ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಎನ್.ವೈ.ಗೋಪಾಲಕೃಷ್ಣ, ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ಅಧ್ಯಕ್ಷ ಜಿ.ಎಸ್. ಮಂಜುನಾಥ್, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷೆ ಸವಿತಾ ರಘು, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್.ರಾಘವೇಂದ್ರ, ಜಿಲ್ಲಾ ಮಡಿವಾಳರ ಸಂಘದ ಅಧ್ಯಕ್ಷ ಬಿ.ರಾಮಪ್ಪ, ಕಾರ್ಯದರ್ಶಿ ಕೆ.ಆರ್.ಮಂಜುನಾಥ್, ಮಡಿವಾಳ ಮಾಚಿದೇವರ ದೇವಸ್ಥಾನ ಅಭಿವೃದ್ಧಿ ಸಮಿತಿ ಗೌರವ ಅಧ್ಯಕ್ಷ ಶಿವಲಿಂಗಪ್ಪ, ಅಧ್ಯಕ್ಷ ಟಿ.ರುದ್ರೇಶ್ ಸೇರಿದಂತೆ ಜಿಲ್ಲೆಯ ಜನಪ್ರತಿನಿಧಿಗಳು, ನಗರಸಭಾ ಸದಸ್ಯರು ಹಾಗೂ ಮಡಿವಾಳ ಸಮಾಜದ ಮುಖಂಡರು ಹಾಗೂ ಗಣ್ಯರು ಭಾಗವಹಿಸುವರು. ಇತಿಹಾಸ ಸಂಶೋಧಕ ಹಾಗೂ ಪ್ರಾಧ್ಯಾಪಕ ಡಾ.ಎನ್. ಎಸ್.ಮಹಂತೇಶ್ ಉಪನ್ಯಾಸ ನೀಡುವರು. ಚಿತ್ರದುರ್ಗ ತಾಲ್ಲೂಕು ಪಂಡರಹಳ್ಳಿಯ ಗಂಜಿಗಟ್ಟೆ ಆರ್.ಕೃಷ್ಣಮೂರ್ತಿ ಮತ್ತು ತಂಡದವರಿಂದ ಗೀತಗಾಯನ ನಡೆಯಲಿದೆ.

### ಎಸ್.ಶೈಲಜಾ ತಾಲ್ಲೂಕು ಮಡಿವಾಳ ಮಹಿಳಾ ಸಂಘ ಅಧ್ಯಕ್ಷರಾಗಿ ಆಯ್ಕೆ.

» ಚಳ್ಳಕೆರೆ

ತಾಲೂಕು ಮಡಿವಾಳ ಮಹಿಳಾ ಸಂಘವನ್ನು ಪ್ರಾರಂಭಿಸಲಾಗಿದೆ ಎಂದು ತಾಲೂಕು ಮಡಿವಾಳ ಸಂಘದ ಮಾಜಿ ಅಧ್ಯಕ್ಷ, ಗ್ರಾಮ ಪಂಚಾಯಿತಿ ಸದಸ್ಯ ಎನ್.ಮಂಜುನಾಥ ತಿಳಿಸಿದರು. ಅವರು, ಪತ್ರಿಕೆಗೆ ಮಾಹಿತಿ ನೀಡಿ, ಮಹಿಳಾ ಸಂಘಟನೆಯನ್ನು ಬಲಗೊಳಿಸುವ ನಿಟ್ಟಿನಲ್ಲಿ ಸಮುದಾಯದ 25 ಮಹಿಳೆಯರನ್ನು ಸಂಘಟನೆ ಮಾಡಿ ಮಹಿಳಾ ಸಂಘವನ್ನು ಅಸ್ತಿತ್ವಕ್ಕೆ ತರಲಾಗಿದೆ. ಗೌರವಾಧ್ಯಕ್ಷರಾಗಿ ಅನುಸೂಯಮ್ಮ, ಅಧ್ಯಕ್ಷರಾಗಿ ನಗರಂಗೆರೆ ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಎಸ್.ಶೈಲಜಾ, ಉಪಾಧ್ಯಕ್ಷರಾಗಿ ಗೀತಾ, ಕಾರ್ಯದರ್ಶಿಯಾಗಿ ಟಿ ಮಂಜುಳಾ, ಖಜಾಂಚಿಯಾಗಿ ವೈ. ರೇಣುಕಮ್ಮ, ಸಂಘಟನಾ ಕಾರ್ಯದರ್ಶಿಯಾಗಿ ಮಂಜಮ್ಮ, ಸದಸ್ಯರಾಗಿ ಕೆ ವಿಜಯಲಕ್ಷ್ಮಿ, ಗಂಗಮ್ಮ, ಎಸ್. ಜಯಲಕ್ಷ್ಮಿ, ಶಿವಗಂಗಮ್ಮ, ಜಿ.ಎಸ್. ಮಂಜುಳಾ, ಎನ್.ರೇಣುಕಾ, ವಿ. ಇಂದು, ಜಿ.ದೀಪ, ಕೆ.ಆರ್. ರೇಣುಕಾ, ಲಕ್ಷ್ಮೀದೇವಿ, ಪಿ. ರೇಣುಕಾ, ರಾಜೇಶ್ವರಿ, ರತ್ನಮ್ಮ, ಪಿ.ಪ್ರೇಮ, ಎ.ಸಣ್ಣಮ್ಮ ವಿಜಯಮ್ಮ, ಎಂ.ಕವಿತಾ, ಡಿ.ಶಾರದ ಇವರನ್ನು ಮಹಿಳಾ ಸಂಘಕ್ಕೆ ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಸಂಸದರ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆ

# ಶಾಲಾ ಆವರಣ ಅನೈತಿಕ ತಾಣಗಳಾಗಬಾರದು

## ಗುಣಮಟ್ಟದ ಶಿಕ್ಷಣಕ್ಕೆ ಆದ್ಯತೆ, ಮಕ್ಕಳಿಗೆ ಮೂಲಭೂತ ಸೌಕರ್ಯ ಸಿಗಬೇಕು; ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್

» ದಾವಣಗೆರೆ




ಜಿಲ್ಲೆಯಲ್ಲಿನ ಎಲ್ಲಾ ಸರ್ಕಾರಿ ಶಾಲೆಗಳಿಗೆ ಕಾಂಪೌಂಡ್ ಸೇರಿದಂತೆ ಕೊಠಡಿ, ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ಆಸನ ವ್ಯವಸ್ಥೆಯನ್ನು ಕಲ್ಪಿಸುವ ಮೂಲಕ ಗುಣಮಟ್ಟದ ಶಿಕ್ಷಣ ಭವಿಷ್ಯದ ನಾಗರಿಕರಾಗುವ ಪ್ರತಿ ಮಕ್ಕಳಿಗೆ ಸಿಗುವಂತೆ ಮಾಡಬೇಕು, ಆದರೆ ಸಂಜೆಯ ವೇಳೆ ಶಾಲಾ ಆವರಣಗಳು ಅನೈತಿಕ ಚಟುವಟಿಕೆಗಳಿಗೆ ಬಳಕೆಯಾಗದಂತೆ ರಕ್ಷಣೆ ಮಾಡಿಕೊಳ್ಳಬೇಕೆಂದು ದಾವಣಗೆರೆ ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್ ಸೂಚನೆ ನೀಡಿದರು.

ಅವರು ಮಂಗಳವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ದಿಶಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಶಾಲಾ ಆವರಣದಲ್ಲಿ ಎಲ್ಲೆಂದರಲ್ಲಿ ಸಂಜೆಯ ವೇಳೆ ಮದ್ಯದ ಬಾಟಲಿಗಳು ಬಿದ್ದಿರುತ್ತವೆ. ಬೆಳಗ್ಗೆ ಶಾಲೆಗೆ ಆಗಮಿಸುವ ಮಕ್ಕಳು ಇದೆಲ್ಲವನ್ನು ಗಮನಿಸುವುದರಿಂದ ಅವರ ಮೇಲೆ ಪರಿಣಾಮ ಬೀರಲಿದೆ. ಆದ್ದರಿಂದ ಪ್ರತಿ ಶಾಲೆಗೆ ಕಾಂಪೌಂಡ್ ಇರಬೇಕು. ಮತ್ತು ಶಾಲೆಯ ಅಕ್ಕಪಕ್ಕದಲ್ಲಿರುವ ಅಂಗಡಿಗಳಲ್ಲಿ ಮಕ್ಕಳ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುವ ತಿನಿಸುಗಳು ಮತ್ತು ಇತರೆ ವಸ್ತುಗಳ ಮಾರಾಟದ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಪರಿಶೀಲನೆ ನಡೆಸಬೇಕೆಂದರು.

ಗ್ರಾಮಾಂತರ ಪ್ರದೇಶಗಳಿಂದ ಪ್ರೌಢಶಾಲೆಗಳಿಗೆ ಆಗಮಿಸುವ ವಿದ್ಯಾರ್ಥಿಗಳಿಗೆ ಬಸ್ ಸೌಕರ್ಯದ ಅನಾನುಕೂಲದಿಂದ ಬೆಳಗಿನ ವೇಳೆ ನಡೆಸುವ ವಿಶೇಷ ತರಗತಿಗಳಿಗೆ ಆಗಮಿಸಲು ಸಮಸ್ಯೆ ಎದುರಾಗಿದೆ ಎಂದು ತಿಳಿಸಿದ್ದು ಎಲ್ಲಾ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲು ಡಿಡಿಪಿಐಗೆ ತಿಳಿಸಿದರು.

ಒತ್ತುವರಿ ಕಡಿವಾಣಕ್ಕೆ ಕ್ರಮ; ನಗರ ಹಾಗೂ ಪಟ್ಟಣ ಪ್ರದೇಶ ಸೇರಿದಂತೆ ಗ್ರಾಮಾಂತರ ಪ್ರದೇಶದಲ್ಲಿ ರಸ್ತೆ ಹಾಗೂ ಚರಂಡಿ ಒತ್ತುವರಿ ಮಾಡಿಕೊಂಡು ಮನೆಗಳನ್ನು ನಿರ್ಮಾಣ ಮಾಡುವುದು ಕಂಡು ಬಂದಿದ್ದು ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಯಾರು ಸಹ ಚರಂಡಿ, ರಸ್ತೆಗಳನ್ನು ಒತ್ತುವರಿ ಮಾಡದಂತೆ ಮನೆ ನಿರ್ಮಾಣ ಮಾಡುವ ವೇಳೆ ಲೈಸೆನ್ಸ್ ನೀಡಬೇಕು. ಉಲ್ಲಂಘನೆ ಮಾಡಿ ನಿರ್ಮಾಣ ಮಾಡಿದ್ದಲ್ಲಿ ಕಾನೂನು ಕ್ರಮ ಕೈಗೊಳ್ಳಬೇಕೆಂದರು. ಓಬಜ್ಜಿಹಳ್ಳಿಯಲ್ಲಿ ರಸ್ತೆಗೆ ಮನೆ ನಿರ್ಮಾಣ ಮಾಡಿದ್ದರಿಂದ ಶವಸಂಸ್ಕಾರ ಮಾಡಲು ಸಮಸ್ಯೆಯಾಗಿದೆ ಎಂದು ಗ್ರಾಮಸ್ಥರು ಮನವಿ ಮಾಡಿದ್ದು ಪರಿಶೀಲನೆ ನಡೆಸಲು ತಿಳಿಸಿದರು.

ನಗರ ಮತ್ತು ಪಟ್ಟಣ ಪ್ರದೇಶದಲ್ಲಿ ಪೈಪ್‌ಲೈನ್ ಅಳವಡಿಸಲು ರಸ್ತೆ ಬಗೆಯುತ್ತಿರುವ ಬಗ್ಗೆ ದಾವಣಗೆರೆ ನಗರದಲ್ಲಿ ಪೈಪ್ ಗ್ಯಾಸ್ ಅಳವಡಿಕೆಗೆ ಹೊಸ ರಸ್ತೆಗಳನ್ನು ತುಂಡರಿಸಲಾಗುತ್ತಿದೆ. ಈ ಬಗ್ಗೆ ನಿಯಮಬದ್ಧವಾಗಿ ಮಾಡಲು ಸಂಬಂಧಿಸಿದ ಇಂಜಿನಿಯರ್‌ಗಳು ಪರಿಶೀಲನೆ ನಡೆಸಬೇಕೆಂದರು.

ಎಲ್ಲೆಂದರಲ್ಲಿ ಕಸ ಹಾಕುವುದು ನಿಯಂತ್ರಿಸಿ; ದಾವಣಗೆರೆ ನಗರ ಸೇರಿದಂತೆ ಜಿಲ್ಲೆಯ ಪಟ್ಟಣ, ಗ್ರಾಮಾಂತರ ಪ್ರದೇಶದಲ್ಲಿ ಎಲ್ಲೆಂದರಲ್ಲಿ ಕಸ ಹಾಕುವುದನ್ನು ತಡೆಗಟ್ಟುವ ಮೂಲಕ ನೈರ್ಮಲ್ಯತೆಯನ್ನು ಕಾಪಾಡಿಕೊಳ್ಳಬೇಕು. ಎಲ್ಲೆಂದರಲ್ಲಿ ಕಸ ಹಾಕುವುದನ್ನು ತಡೆಗಟ್ಟಲು ಜನರಲ್ಲಿ ಹೆಚ್ಚಿನ ಜಾಗೃತಿ ಮೂಡಿಸಬೇಕು. ನಗರ, ಪಟ್ಟಣ ಹಾಗೂ ಗ್ರಾಮಾಂತರ ಪ್ರದೇಶದಲ್ಲಿ ಮನೆಯಲ್ಲಿನ ಹಸಿ–ಒಣ ಕಸ ಸಂಗ್ರಹಣೆ ಮಾಡಲು ವಾಹನಗಳನ್ನು ನೀಡಿದ್ದು ಸರಿಯಾಗಿ ಸಂಗ್ರಹಣೆ ಮಾಡುವ ಮೂಲಕ ಇದರ ವಿಂಗಡಣೆಯನ್ನು ಸಕಾಲದಲ್ಲಿ ಕೈಗೊಂಡು ಅವರಗೆರೆಯಲ್ಲಿ ಘನತ್ಯಾಜ್ಯ ಸಂಗ್ರಹ ಘಟಕದಲ್ಲಿ ಪದೇ ಪದೇ ಬೆಂಕಿ ಕಾಣಿಸಿಕೊಳ್ಳುತ್ತಿದ್ದು ಈಗಾಗದಂತೆ ವಿಂಗಡಣೆ ಮಾಡಿ ವಿಲೆಗೆ ಕ್ರಮ ವಹಿಸಲು ಸೂಚನೆ ನೀಡಿದರು.

ನಾಯಿಗಳ ಸಂತಾನ ನಿಯಂತ್ರಣಕ್ಕೆ ಕ್ರಮ; ನಾಯಿಗಳ ಹಾವಳಿಯನ್ನು ತಡೆಗಟ್ಟಲು ಈಗಾಗಲೇ ಪಾಲಿಕೆ ವ್ಯಾಪ್ತಿಯಲ್ಲಿ ನಾಯಿಗಳ ಸಂತಾನ ನಿಯಂತ್ರಣಕ್ಕಾಗಿ ಎಬಿಸಿ ಚಿಕಿತ್ಸೆ ಮಾಡಿದ್ದು ಗ್ರಾಮಾಂತರ ಪ್ರದೇಶದಲ್ಲಿಯು ಇದನ್ನು ಕೈಗೊಳ್ಳಬೇಕು. ಗ್ರಾಮಾಂತರ ಪ್ರದೇಶದಲ್ಲಿಯು ಇವುಗಳ ನಿಯಂತ್ರಣ ಮಾಡಬೇಕಾಗಿದ್ದು ಆರಂಭಿಕವಾಗಿ ಸಂತೆಬೆನ್ನೂರಿನಲ್ಲಿ ನಾಯಿಗಳ ಸಂತಾನ ನಿಯಂತ್ರಣಕ್ಕಾಗಿ ಎಬಿಸಿ ಶೀಘ್ರದಲ್ಲಿ ಆರಂಭಿಸಲಾಗುತ್ತದೆ ಎಂದರು.

ಕ್ಯಾಂಟೀನ್ ಆರಂಭಿಸಲು ಸಲಹೆ; ಜಿಲ್ಲಾಡಳಿತ ಭವನಕ್ಕೆ ಸಾಕಷ್ಟು ಸಾರ್ವಜನಿಕರು ಆಗಮಿಸುವುದರಿಂದ ಅವರಿಗೆ ಬೇಕಾದ ಉಪಹಾರ, ಊಟ, ಕಾಫಿ, ಟೀ ಯನ್ನು ಪಡೆಯಲು ಗುಣಮಟ್ಟ ಹಾಗೂ ಶುಚಿತ್ವ, ರಿಯಾಯಿತಿ ದರದಲ್ಲಿ ನೀಡಲು ಕ್ಯಾಂಟೀನ್ ಆರಂಭಿಸಬೇಕೆಂದು ಸಂಸದರು ಸಲಹೆ ನೀಡಿದರು. ಈ ವೇಳೆ ಶೀಘ್ರದಲ್ಲಿಯೇ ಆರಂಭಿಸಲಾಗುತ್ತದೆ ಎಂದು ಎಡಿಸಿ ತಿಳಿಸಿದರು.

ಸಭೆಯಲ್ಲಿ ಹೊನ್ನಾಳಿ ಶಾಸಕರಾದ ಶಾಂತನಗೌಡ ಡಿ.ಜಿ., ಮೇಯರ್ ಚಮನ್‌ಸಾಬ್ ಕೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ವೈಜ್ಞಾನಿಕ ಮನೋಭಾವ ಬೆಳಸಿಕೊಳ್ಳಿ

» ಪರಶುರಾಂಪುರ



ವಿದ್ಯಾರ್ಥಿಗಳು ತರಗತಿಯಲ್ಲಿ ಅಥವಾ ಹೊರಗಡೆಯಾಗಲಿ ಸಮಸ್ಯೆಗಳು ಕಂಡು ಬಂದಾಗ ಪ್ರಶ್ನಿಸುವ ಮೂಲಕ ವೈಚಾರಿಕ ಮತ್ತು ವೈಜ್ಞಾನಿಕ ಚಿಂತನೆ ಬೆಳೆಸಿಕೊಳ್ಳಬೇಕು ಎಂದು ಪ್ರೊ.ನರೇಂದ್ರ ನಾಯಕ್ ತಿಳಿಸಿದರು.

ಗ್ರಾಮದ ಸರ್ವೋದಯ ಶಿಕ್ಷಣ ಸಂಸ್ಥೆಯಲ್ಲಿ ಸೋಮವಾರ ಆಯೋಜಿಸಿದ್ದ ವಿದ್ಯಾರ್ಥಿಗಳಲ್ಲಿ ಮೌಢ್ಯತೆಯನ್ನ ಪ್ರಶ್ನಿಸುವ ಹಾಗೂ ವೈಜ್ಞಾನಿಕ ಮನೋಭಾವ ಬೆಳೆಸುವ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ಇಂದು ಜನರಲ್ಲಿ ವೈಜ್ಞಾನಿಕ ಮನೋಭಾವನೆಯ ಕೊರತೆ ಅನಕ್ಷರನಿಗಿಂತಲೂ ಅಕ್ಷರಸ್ಥರಲ್ಲಿಯೇ ಹೆಚ್ಚುತ್ತಿದೆ. ವಿದ್ಯಾರ್ಥಿಗಳು ಅತಿಮಾನುಶ ಶಕ್ತಿ ಮತ್ತು ಮೂಢನಂಬಿಕೆಗಳನ್ನು ನಂಬದೇ ಅವುಗಳನ್ನು ವೈಜ್ಞಾನಿಕ ದೃಷ್ಟಿಯಿಂದ ನೋಡಬೇಕು ಎಂದು ತಿಳಿಸಿದರು.

ಸಂಸ್ಥೆಯ ಸಂಸ್ಥಾಪಕ ಹಾಗೂ ಕಾಯ9ದರ್ಶಿ ಚನ್ನಕೇಶವ ಮಾತನಾಡಿ, ಕಲಿಕೆಯನ್ನು ಪಠ್ಯಕ್ಕೆ ಸೀಮಿತಗೊಳಿಸದೆ ಪ್ರಯೋಗಗಳು ಹಾಗೂ ವಿಜ್ಞಾನ ಮಾದರಿಗಳ ಮೂಲಕ ವಿದ್ಯಾರ್ಥಿಗಳ ಮನ ಮುಟ್ಟುವಂತೆ ಮಾಡಿ. ಮೂಢನಂಬಿಕೆಗಳಿಗೆ ಹೊಂದಿಕೊಂಡಿರುವ ಸಮಾಜದ ದಿಕ್ಕನ್ನು ಬದಲಿಸುವ ಶಕ್ತಿ ಭವಿಷ್ಯದ ಪ್ರಜೆಗಳಾದ ಮಕ್ಕಳಲ್ಲಿ ಇದೆ. ಯಾವುದು ಸತ್ಯವೋ ಅದನ್ನು ಮಾತ್ರ ನಂಬುವಂತೆ ಮಕ್ಕಳಲ್ಲಿ ಅರಿವು ಮೂಡಿಸಿ ಎಂದು ಕಿವಿಮಾತು ಹೇಳಿದರು.

ಈ ವೇಳೆಯಲ್ಲಿ ಸಂಸ್ಥೆಯ ಕಾರ್ಯದರ್ಶಿ ಚನ್ನಕೇಶವ, ಪ್ರಾಂಶುಪಾಲ ಶಾಂತಕುಮಾರ್, ಮುಖ್ಯ ಶಿಕ್ಷಕ ಶ್ರೀಶೈಲ ಮೂರ್ತಿ, ಅಶ್ವಿನಿ, ಸಂಯೋಜಕ ಹರೀಶ್ ಯಾದವ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಮೀರಸಾಬಿಹಳ್ಳಿ: ರಾಣಿಕೆರೆ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ನೂತನ ನಿರ್ದೇಶಕ ಆಯ್ಕೆ ಘೋಷಣೆ



**ಚಳ್ಳಕೆರೆ:** ತಾಲ್ಲೂಕಿನ ಮೀರಸಾಬಿಹಳ್ಳಿ ರಾಣಿಕೆರೆ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ನಿಯಮಿತದ ಆಡಳಿತ ಮಂಡಳಿಯ ಚುನಾವಣೆಯಲ್ಲಿ ಒಟ್ಟು 10 ಜನ ಸದಸ್ಯರು ಸಂಘದ ನೂತನ ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆಂದು ಚುನಾವಣಾಧಿಕಾರಿಗಳು ಘೋಷಿಸಿದ್ದಾರೆ. ಸಂಘದ ನೂತನ ಸದಸ್ಯರಾಗಿ ಬಿ.ಎಲ್.ಬೀರಲಿಂಗೇಗೌಡ, ವಂಶಿಕೃಷ್ಣ, ಕೆ.ನಿಂಗಪ್ಪ, ಶಿವಣ್ಣ, ಜಿ.ಮಂಜುನಾಥ, ಎನ್.ನಾಗರಾಜು, ಟಿ.ಶಿವಣ್ಣ, ಸುಶೀಲಮ್ಮ, ಶಾಂತಮ್ಮ, ಸಾಲಗಾರರಲ್ಲದ ಕ್ಷೇತ್ರದಿಂದ ಜಿ.ಎಚ್.ಲೋಕನಾಥ ಆಯ್ಕೆಯಾಗಿರುತ್ತಾರೆ.

## ಹಾಲು ಉತ್ಪಾದಕರ ಸಹಕಾರ ಸಂಘಗಳ ಕಾರ್ಯದರ್ಶಿಗಳಿಗೆ ತರಬೇತಿ ಕಾರ್ಯಕ್ರಮ

**ಚಿತ್ರದುರ್ಗ:** ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಜಿಲ್ಲಾ ಸಹಕಾರ ಯೂನಿಯನ್ ಇವರ ಸಂಯುಕ್ತಾಶ್ರಯದಲ್ಲಿ ಇದೇ ಜ.29ರಂದು ಬೆಳಿಗ್ಗೆ 10.30ಕ್ಕೆ ಹೊಸದುರ್ಗ ಪಟ್ಟಣದ ಎಪಿಎಂಸಿ ಮಾರುಕಟ್ಟೆ ರೈತ ಭವನ ಸಭಾಂಗಣದಲ್ಲಿ "ಹೊಸದುರ್ಗ ತಾಲ್ಲೂಕಿನಲ್ಲಿ ಬರುವ ಹಾಲು ಉತ್ಪಾದಕರ ಸಹಕಾರ ಸಂಘಗಳ ಕಾರ್ಯದರ್ಶಿಗಳಿಗೆ ಒಂದು ದಿನದ ವಿಶೇಷ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕ ಆರ್.ರಾಮರೆಡ್ಡಿ ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಹೆಚ್.ಎಂ.ದ್ಯಾಮಣ್ಣ ಕೋಗುಂಡೆ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಸಹಕಾರ ಯೂನಿಯನ್ ಉಪಾಧ್ಯಕ್ಷ ಹೆಚ್.ವಿ.ಪ್ರಶಾಂತ್, ನಿರ್ದೇಶಕರಾದ ಜಿಂಕಲು ಬಸವರಾಜ್, ಜಿ.ಈ.ಅಜ್ಜಪ್ಪ, ಮಾತೃಶ್ರೀ ಎನ್.ಮಂಜುನಾಥ್, ಹೆಚ್.ಎನ್.ತಿಪ್ಪೇಸ್ವಾಮಿ, ಪ್ರಭಾವತಿ, ಡಿ.ಎಂ.ಮಹೇಶ್ವರಪ್ಪ, ಎ.ಚನ್ನಬಸಪ್ಪ, ಜಿ.ಎಸ್.ಹರೀಶ್, ಕೆ.ಜಗಣ್ಣ, ಶಿವಮೊಗ್ಗ ಹಾಲು ಒಕ್ಕೂಟ ನಿರ್ದೇಶಕರಾದ ಜಿ.ಬಿ.ಶೇಖರಪ್ಪ, ಬಿ.ಸಿ.ಸಂಜೀವಮೂರ್ತಿ, ಜಿ.ಪಿ.ರೇವಣಸಿದ್ದಪ್ಪ, ಬಿ.ಆರ್.ರವಿಕುಮಾರ್ ಭಾಗವಹಿಸುವರು.

## ಪ್ರಮುಖ ಸುದ್ದಿ

# ಬಾಪೂಜಿ ಆಯುರ್ವೇದಿಕೆ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಗೆ ದೇಹದಾನ ಮಾಡಿದ ಬೈಲಹೊಂಗಲದ ರಾಮಣ್ಣಚಾರಿಟೇಬಲ್ ಟ್ರಸ್ಟ್

» ಚಳ್ಳಕೆರೆ




ವೈದ್ಯಕೀಯ ಕ್ಷೇತ್ರದ ವಿದ್ಯಾರ್ಥಿಗಳಿಗೆ ಸದುಪಯೋಗವಾಗುವ ನಿಟ್ಟಿನಲ್ಲಿ ಮೃತದೇಹವನ್ನು ಹಸ್ತಾಂತರ ಮಾಡಿದ ಅಪರೂಪದ ಘಟನೆ ನಗರದ ಬಾಪೂಜಿ ಆಯುರ್ವೇದಿಕೆ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ನಡೆದಿದ್ದು, ಕಾಲೇಜು ಪ್ರಾಂಶುಪಾಲ ಡಾ.ಸಿ.ಟಿ.ಬಸವರಾಜಪ್ಪ ದೇಹದಾನ ಮಾಡಿದ ಕುಟುಂಬದ ಸದಸ್ಯರ ಕಾರ್ಯವನ್ನು ಮುಕ್ತಕಂಠದಿಂದ ಪ್ರಶಂಸಿಸಿ ಕಾಲೇಜು ಆಡಳಿತಮಂಡಳಿಯಿಂದ ಅಭಿನಂದಿಸಿದ್ದಾರೆ.

ಬೆಳಗಾವಿ ಜಿಲ್ಲೆಯ ಬೈಲಹೊಂಗಲದ ಡಾ.ರಾಮಣ್ಣ ಚಾರಿಟೇಬಲ್ ಟ್ರಸ್ಟ್ ಮತ್ತು ಎಸ್‌ಜಿವಿ ಆಯುರ್ವೇದ ಮಹಾವಿದ್ಯಾಲಯದ ವತಿಯಿಂದ ಚ 'ಂದ್ರಶೇಖರಯ್ಯಫಕೀರಯ್ಯಮುಪ್ಪಯ್ಯನ 'ವರಮಠ(85) ಇವರ ಮೃತದೇಹವನ್ನು ಆಯುರ್ವೇದಿಕ್ ಕಾಲೇಜಿನ ವಿದ್ಯಾರ್ಥಿಗಳ ಸಂಶೋಧನೆ ಮತ್ತು ದೇಹ ಅಧ್ಯಯನ ಕಾರ್ಯಕ್ಕಾಗಿ ನೀಡಲಾಗಿದೆ. ವಿಶೇಷವಾಗಿ ಪ್ರಥಮ ವರ್ಷದ ಆಯುರ್ವೇದಿಕ್ ವಿದ್ಯಾರ್ಥಿಗಳಿಗೆ ಮೃತಪಟ್ಟ ದೇಹದ ರಚನೆ ಮತ್ತು ಅದರ ಕಾರ್ಯಗಳ ಬಗ್ಗೆ ಹೆಚ್ಚು ತಿಳಿಯಲು ಮೃತದೇಹದಿಂದ ಇನ್ನೂ ಹೆಚ್ಚು ಪರಿಣಿತಿಪಡೆಯುವ ನಿಟ್ಟಿನಲ್ಲಿ ಬೋಧನೆ ಮಾಡಬಹುದು ಎಂದು ಪ್ರಾಂಶುಪಾಲರು ತಿಳಿಸಿದ್ದಾರೆ.

ಮೆಡಿಕಲ್ ಕಾಲೇಜು ಡೀನ್ ಡಾ.ಆರ್.ಲಕ್ಷ್ಮಿನಾರಾಯಣ ಮಾತನಾಡಿ, ವೈದ್ಯ ವಿದ್ಯಾರ್ಥಿಗಳ ಸಮ್ಮುಖದಲ್ಲಿ ಶರೀರದ ಅಧ್ಯಯನ, ರಚನೆ, ದೇಹದ ಅಂಗಗಳಾದ ಕಣ್ಣು, ಹೃದಯ ಇತರೆ ಭಾಗಗಳ ಅಧ್ಯಯನಕ್ಕೆ ಮೃತ ಶರೀರ ಹೆಚ್ಚು ಉಪಯುಕ್ತವಾಗುತ್ತದೆ. ಮರಣದ ನಂತರ ಅಂತ್ಯಸಂಸ್ಕಾರ ಮಾಡುವುದು ವಾಡಿಕೆ.

ಆದರೆ, ಈ ಕುಟುಂಬ ವಿದ್ಯಾರ್ಥಿಗಳ ಅಧ್ಯಯನಕ್ಕಾಗಿ ದೇಹದಾನ ಮಾಡುವ ಉತ್ತಮ ನಿರ್ಣಯಕೈಗೊಂಡು ಬೆಳಗಾವಿಯಿಂದ ಇಲ್ಲಿಗೆ ಹಸ್ತಾಂತರ ಮಾಡಿದ್ದಾರೆ. ಈ ಕಾರ್ಯ ಪ್ರಶಂಸನೀಯವೆಂದರು.

ಇದೇ ಸಂದರ್ಭದಲ್ಲಿ ಬೈಲಹೊಂಗಲದ ಡಾ.ರಾಮಣ್ಣ ಚಾರಿಟೇಬಲ್ ಟ್ರಸ್ಟ್ ಮುಖ್ಯಸ್ಥರಾದ ಡಾ.ಮಹಂತೇಶ್‌ರಾಮಣ್ಣನವರ, ಐ.ಆರ್.ಮಠಪತಿ, ಕುಟುಂಬದ ಸದಸ್ಯರು ಕಾಲೇಜು ಆಡಳಿತಮಂಡಳಿಗೆ ದೇಹದಾನ ಮಾಡಿದರು. ಅಂಗರಚನೆ ವಿಭಾಗದ ಮುಖ್ಯಸ್ಥ ಡಾ.ಮೋನೆದಾಮೋದರ್, ಎಲ್ಲಾ ವಿಭಾಗದ ಮುಖ್ಯಸ್ಥರು, ವೈದ್ಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T